ಸಂಪುಟ : 10 ಸಂಚಿಕೆ: 108 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 108 Pages : 4+2 Price : 3.00 Friday May 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ



■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ 2025–26ನೇ ಸಾಲಿನ ಯು.ಪಿ.ಎಸ್.ಸಿ ಹಾಗೂ ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಉನ್ನತ ಶೈಕ್ಷಣಿಕ ವ್ಯಾಸಂಗ ಮಾಡಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಈ ತರಬೇತಿಯ ಸದುಪಯೋಗಪಡಿಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾಧ್ಯಕ್ಷ ಹಾಗೂ ಗದಗ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಹೇಳಿದ್ದಾರೆ.

2025–26ನೇ ಸಾಲಿನ ಯು.ಪಿಎಸ್.ಸಿ ಹಾಗೂ ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿಯನ್ನು 2ಎ, 3ಎ. 3ಬಿ ವಿದ್ಯಾರ್ಥಿಗಳು ಪಡೆಯಬಹುದು. ಅವರು https//bcwd.karanataka.gov.in, sevasindhuservices.karanataka.go.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ–8050370006 ಸಂಖ್ಯೆಗೆ ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ ಬೆಳಿಗ್ಗೆ 10ರಿಂದ ಸಂಜೆ 5.30ರೊಳಗಾಗಿ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತ ಅಕ್ರಂ ಪಾಷ ಹಾಗೂ ಸರಕಾರದ ಕಾರ್ಯದರ್ಶಿ ಸಂಜಯ ಶೆಟ್ಟೆಣ್ಣವರ ಮಾಹಿತಿ ನೀಡಿರುವುದಾಗಿ ಡಾ. ಬಸವರಾಜ ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನಿಷ್ಠ ಬೆಂಬಲ ಬೆಲೆ ಹೆಚ್ಚಳ: ಹರ್ಷ



■ವಿಜಯಸಾಕ್ಷಿ ಸುದ್ದಿ, ಗದಗ

ಮಳೆಗಾಲದ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ನಾಯಕತ್ವದ ಕೇಂದ್ರ ಸರ್ಕಾರವು ಭತ್ತ, ರಾಗಿ, ಜೋಳ, ಮೆಕ್ಕೆಜೋಳ, ಸಜ್ಜೆ, ತೊಗರಿ, ಉದ್ದು, ಹೆಸರು ಕಾಳು, ಸೋಯಾ, ಎಳ್ಳು, ಹುಚ್ಚೆಳ್ಳು, ಹತ್ತಿ ಸೇರಿದಂತೆ 14 ಬಗೆಯ ಆಹಾರ ಧಾನ್ಯಗಳ ಕನಿಷ್ಠ ಬೆಂಬಲ ಬೆಲೆಯನ್ನು (MSP) ಹೆಚ್ಚಿಸುವ ಮೂಲಕ ದಿಟ್ಟ ಹೆಜ್ಜೆ ಇಟ್ಟಿದ್ದಾರೆ ಎಂದು ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಕ್ರಮವು ದೇಶದ ಒಟ್ಟು ವಾರ್ಷಿಕ ಆಹಾರ ಧಾನ್ಯ ಉತ್ಪಾದನೆಯ ಶೇ.50ಕ್ಕಿಂತ ಹೆಚ್ಚು ಪಾಲನ್ನು ಹೊಂದಿರುವ ಬೆಳೆಗಳ ಕೃಷಿಯನ್ನು ಉತ್ತೇಜಿಸುವ ಉದ್ದೇಶವನ್ನು ಹೊಂದಿದೆ. ಹೆಚ್ಚಿದ ಕನಿಷ್ಠ ಬೆಂಬಲ ಬೆಲೆಯು ರೈತರು ತಮ್ಮ ಉತ್ಪನ್ನಗಳಿಗೆ ನ್ಯಾಯಯುತ ಬೆಲೆಯನ್ನು ಪಡೆಯುವುದನ್ನು ಖಚಿತಪಡಿಸುತ್ತದೆ. ದೇಶದ ಆಹಾರ ಧಾನ್ಯ ಉತ್ಪಾದಕರ ಆದಾಯವನ್ನು ದ್ವಿಗುಣಗೊಳಿಸುವ ದೃಢನಿಶ್ಚಯದ ಗುರಿಗೆ ಮೀಸಲಾಗಿರುವ ಮೋದಿ ಅವರ ನೇತೃತ್ವದ ಎನ್‌ಡಿಎ ಸರ್ಕಾರವು ಹಿಂದಿನ ವರ್ಷಗಳಿಗಿಂತ ಹೆಚ್ಚಿನ ಬೆಂಬಲ ಬೆಲೆಯನ್ನು ನಿಗದಿಪಡಿಸಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

### ಸರ್ಕಾರಿ ಶಾಲೆಗಳಲ್ಲೂ ಅತ್ಯುತ್ತಮ ಶಿಕ್ಷಣ ನಮ್ಮ ಗುರಿ: ಸಿ.ಎಂ ಸಿದ್ದರಾಮಯ್

# ಪ್ರತಿಭೆ ಯಾರ ಸ್ವತ್ತೂ ಅಲ್ಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶ ಸಿಕ್ಕರೆ ಎಲ್ಲರ ಪ್ರತಿಭೆಯೂ ಹೊರಗೆ ಬರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಶಾಲಾ ಶೈಕ್ಷಣಿಕ ವರ್ಷದ ಪುನರಾರಂಭದ ಪ್ರಯುಕ್ತ ಇಲ್ಲಿನ ಆಡುಗೋಡಿಯ ಕರ್ನಾಟಕ ಸರ್ಕಾರಿ ಕನ್ನಡ ಶಾಲೆಯಲ್ಲಿ ಶಿಕ್ಷಣ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಶಾಲಾ ಕೊಠಡಿಗಳ ಪರಿಶೀಲನೆ ನಡೆಸಿದ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರ್ವರಿಗೂ ಶಿಕ್ಷಣ ಕೊಡುವುದು ಸರ್ಕಾರದ ಜವಾಬ್ದಾರಿ. ಶಿಕ್ಷಣ ಕೇವಲ ಜ್ಞಾನ ಕೊಡುವುದಿಲ್ಲ, ವ್ಯಕ್ತಿತ್ವವನ್ನು ರೂಪಿಸುತ್ತದೆ. ಪ್ರತಿಯೊಬ್ಬರೂ ಶಿಕ್ಷಣ ಪಡೆದುಕೊಳ್ಳಲೇಬೇಕು. ಇದರಿಂದ ಸ್ವಾಭಿಮಾನ ಬೆಳೆದು ಸಮಾಜದ



ಆಸ್ತಿಯಾಗುತ್ತೇವೆ ಎಂದರು.

ಡಾ.ಬಾಬಾ ಸಾಹೇಬರು ದೇಶ ಕಂಡ ಮಹಾನ್ ವಿದ್ವಾಂಸರಲ್ಲಿ ಒಬ್ಬರು. ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶ ಸಿಕ್ಕರೆ ಎಲ್ಲರ ಒಳಗಿರುವ ಪ್ರತಿಭೆಯೂ ಹೊರಗೆ ಬರುತ್ತದೆ. ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನವನ್ನ ಎಲ್ಲರೂ ಪಾಲಿಸಬೇಕು ಎಂದರು.

ಮಕ್ಕಳಿಗೆ ಉತ್ತಮ ಪೌಷ್ಠಿಕಾಂಶ ಸಿಕ್ಕರೆ ಮಾತ್ರ ಉತ್ತಮ ವಿದ್ಯಾರ್ಥಿಗಳಾಗಿ ಓದಲು ಸಾಧ್ಯ. ಈ ಕಾರಣಕ್ಕೇ ನಾವು ಮಕ್ಕಳಿಗೆ ಮೊಟ್ಟೆ, ಬಾಳೆಹಣ್ಣು, ಚಿಕ್ಕಿ, ಹಾಲು ಕೊಡುತ್ತಿದ್ದೇವೆ. ಇದರ ಜೊತೆಗೆ ಪಠ್ಯ, ಸಮವಸ್ತ್ರ, ಶೂ, ಸಾಕ್ಸ್, ಪುಸ್ತಕಗಳನ್ನೂ ಸರ್ಕಾರದಿಂದಲೇ ಕೊಡುತ್ತಿದ್ದೇವೆ ಎಂದರು.

ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಈ ಬಾರಿಯೂ 725 ಕೋಟಿ ಹಣ ಕೊಟ್ಟಿದ್ದೇವೆ. ಕಳೆದ ವರ್ಷವೂ ಕೊಟ್ಟಿದ್ದೇವೆ. ಗುಣಮಟ್ಟದಲ್ಲಿ ಸರ್ಕಾರಿ ಶಾಲೆಗಳು ಹಿಂದುಳಿದಿಲ್ಲ. ಗ್ರೇಸ್ ಮಾರ್ಕ್ಸ್ ಇಲ್ಲದೆ ಮಕ್ಕಳು ಉತ್ತಮ ಫಲಿತಾಂಶ ಪಡೆಯುವ ನಿಟ್ಟಿನಲ್ಲಿ



ಮಕ್ಕಳು ಎಷ್ಟು ಭಾಷೆ ಕಲಿತರೂ ಒಳ್ಳೆಯದೇ. ಹೆಚ್ಚೆಚ್ಚು ಭಾಷೆ ಕಲಿತು ಕನ್ನಡದಲ್ಲಿ ಮುಂದಿರಿ. ಕನ್ನಡದಲ್ಲಿ ಕಲಿತರೆ ಮಕ್ಕಳು ಪ್ರತಿಭಾವಂತರಾಗುವುದಿಲ್ಲ ಎನ್ನುವುದು ತಪ್ಪು. ವೈಜ್ಞಾನಿಕ ಶಿಕ್ಷಣ ಪಡೆದು, ವೈಜ್ಞಾನಿಕ ಗುಣಮಟ್ಟ ಬೆಳೆಸಿಕೊಂಡರೆ ಮಕ್ಕಳು ಉತ್ತಮ ಪ್ರತಿಭಾವಂತರಾದಂತೆ. ಆದ್ದರಿಂದ ಸರ್ಕಾರಿ ಶಾಲೆಗಳ ಹಾಜರಾತಿ ಹೆಚ್ಚಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಿ ಹೇಳಿದರು.

ಶಿಕ್ಷಣ ಇಲಾಖೆ ಪ್ರಯತ್ನಿಸುತ್ತಿದೆ. ಎರಡನೇ ಮತ್ತು ಮೂರನೇ ಸಪ್ಲಿಮೆಂಟರಿ ಪರೀಕ್ಷೆಗಳಿಗೆ ಶುಲ್ಕ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸಚಿವ ರಾಮಲಿಂಗಾರೆಡ್ಡಿಯವರ ಕ್ಷೇತ್ರದಲ್ಲಿ ಸರ್ಕಾರಿ ಶಾಲೆಗಳು ಉತ್ತಮ ಗುಣಮಟ್ಟ ಕಾಯ್ದುಕೊಂಡಿವೆ. ಇದೇ ಗುಣಮಟ್ಟ ಇಡೀ ರಾಜ್ಯಾದ್ಯಂತ ಆಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಚಿವ ಮಧು ಬಂಗಾರಪ್ಪ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.



### ಜನಪರ ಕಾಳಜಿಯ ಮೂಲಕ ಜನಮನ ಗೆದ್ದ ಸಜ್ಜನ ರಾಜಕಾರಣಿ । ಜನ್ಮದಿನದ ನಿಮಿತ್ತ ವಿಶೇಷ ಕಾರ್ಯಕ್ರಮ ಇಂದು


# 75ರ ವಸಂತದಲ್ಲಿ ಜಿ.ಎಸ್. ಗಡ್ಡದೇವರಮಠ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜಕಾರದಲ್ಲಿ ಅನೇಕ ಮುಖಂಡರು ತಮ್ಮದೇ ಆದ ವರ್ಚಸ್ಸು, ಜಾಣ್ಮೆ, ಜನಹಿತ ಕಾರ್ಯಗಳು ಇತ್ಯಾದಿಗಳಿಂದ ಹೆಸರು ಸಂಪಾದಿಸಿರುತ್ತಾರೆ. ಗದಗ ಜಿಲ್ಲೆಯ ರಾಜಕಾರಣದಲ್ಲಿಯೂ ಸಹ ಎಲ್ಲ ಪಕ್ಷಗಳ ಅನೇಕ ಮಹನೀಯರು ವಿಶೇಷ ಹೆಸರು ಮಾಡಿ ಜನಮಾನಸದಲ್ಲಿ ಉಳಿದುಕೊಂಡಿದ್ದಾರೆ. ಅಂತವರ ಸಾಲಿನಲ್ಲಿ ಶಿರಹಟ್ಟಿ ಮತಕ್ಷೇತ್ರದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಓರ್ವರು.

ಶಿರಹಟ್ಟಿ ಕ್ಷೇತ್ರಕ್ಕೆ ಎರಡು ಬಾರಿ ಶಾಸಕರಾಗಿ ಆಯ್ಕೆಯಾಗುವ ಮೂಲಕ ತಮ್ಮದೇ ಆದ ಛಾಪನ್ನು ಮೂಡಿಸಿರುವ ಜಿ.ಎಸ್. ಗಡ್ಡದೇವರಮಠ ಅವರು ಕಾನೂನು ಪದವಿ ಪಡೆದಿದ್ದರೂ ಸಹ ವಕೀಲಿ ವೃತ್ತಿಯಲ್ಲಿ ಹೆಚ್ಚು ತೊಡಗಿಸಿಕೊಳ್ಳದೆ, ಕೃಷಿಯತ್ತ ತಮ್ಮ ನೋಟವನ್ನು ಹರಿಸಿದರು. ನಂತರ 1978ರಲ್ಲಿ ಪುರಸಭೆ ಸದಸ್ಯರಾಗಿ ಆಯ್ಕೆಯಾಗುವ ಮೂಲಕ ರಾಜಕೀಯಕ್ಕೆ ಪ್ರವೇಶಿಸಿದ ಇವರು ಅಲ್ಲಿಂದ ಹಿಂತಿರುಗಿ ನೋಡಿದ್ದಿಲ್ಲ. ತಮ್ಮ ಪ್ರಾಮಾಣಿಕತೆ, ಜನಪರ ಕಾಳಜಿ ಮೂಲಕ ಜನರ ಮನಸ್ಸನ್ನು ಗೆದ್ದು ಸಜ್ಜನ ರಾಜಕಾರಣಿ ಎನ್ನುವ ಹೆಸರಿಗೆ ಪಾತ್ರರಾದರು.

ನಂತರ ಮತ್ತೊಂದು ಅವಧಿಗೆ ಪುರಸಭೆಗೆ ಆಯ್ಕೆಯಾಗಿ ಊರಿನ ಪ್ರಥಮ ಪ್ರಜೆ(ಪುರಸಭಾಧ್ಯಕ್ಷ)ಯಾದರು. ಸಜ್ಜನಿಕೆ ಮತ್ತು ಮೌಲ್ಯಯುತ ರಾಜ–ಕಾರಣ ಅವರನ್ನು ಬಿಡದೆ 1999ರಲ್ಲಿ ಶಿರಹಟ್ಟಿ ಮತಕ್ಷೇತ್ರದಿಂದ ವಿಧಾನಸಭೆಗೆ ಸ್ಪರ್ಧಿಸುವಂತೆ ಮಾಡಿ ಅಲ್ಲಿ ವಿಜೇತರಾಗುವ ಮೂಲಕ ಪ್ರಥಮ ಬಾರಿಗೆ ಶಾಸಕರಾದರು. 2004ರಲ್ಲಿ ನಡೆದ ಚುನಾವಣೆಯಲ್ಲಿಯೂ



ಮರು ಆಯ್ಕೆಯಾಗಿ ಎರಡನೇ ಬಾರಿ ಶಾಸಕರಾಗಿ ಕಾರ್ಯನಿರ್ವಹಿಸಿದರು.

ಇಂತಹ ಅಪರೂಪದ ವ್ಯಕ್ತಿತ್ವ ಹೊಂದಿರುವ ಜಿ.ಎಸ್. ಗಡ್ಡದೇವರಮಠ ಅವರು 75ನೇ ವಸಂತಕ್ಕೆ ಕಾಲಿಡುತ್ತಿರುವ ಸಂದರ್ಭದಲ್ಲಿ ಅವರ ಹುಟ್ಟುಹಬ್ಬವನ್ನು ಪಕ್ಷಾತೀತ ಹಾಗೂ ಜ್ಯಾತ್ಯಾತೀತವಾಗಿ ಆಚರಿಸಲು ಅವರ ಅಭಿಮಾನಿಗಳು ನಿರ್ಧರಿಸಿದ್ದು, ಇದೊಂದು ಮಾದರಿ ಕಾರ್ಯಕ್ರಮವಾಗಲಿದೆ. ದಿ.30ರಂದು ಶುಕ್ರವಾರ ಪಟ್ಟಣದ ಚನ್ನಮ್ಮನವನ ಕಲ್ಯಾಣಮಂಟಪದಲ್ಲಿ ಮುಂಜಾನೆ 10 ಗಂಟೆಗೆ ಬಾಳೆಹೊನ್ನೂರು ರಂಭಾಪುರಿ ವೀರಸಿಂಹಾಸನಾಧೀಶ್ವರ ಜ.ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ಸಾನ್ನಿಧ್ಯದಲ್ಲಿ ನಾಡಿನ ಅನೇಕ ಮುಖಂಡರ ಸಮ್ಮುಖದಲ್ಲಿ 'ದೇಶದ ಸಿಂಧೂರ ಕಾಯುತ್ತಿರುವ ವೀರಯೋಧರ ಕುಟುಂಬದವರಿಗೆ ಗೌರವ ಸನ್ಮಾನ ಸಮರ್ಪಣೆ' ಎನ್ನುವ ವಿಶಿಷ್ಟ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, 75ನೇ ವರ್ಷದ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರುವ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಅವರಿಗೆ ಅಭಿನಂದನೆ ಸಲ್ಲಿಸಲಿದ್ದಾರೆ.

ತಮ್ಮ ಶಾಸಕತ್ವದ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಸದಾ ಚಿಂತಿಸುತ್ತಿದ್ದ ಇವರು ಪಟ್ಟಣಕ್ಕೆ ತುಂಗಭದ್ರಾ ನದಿಯಿಂದ ಕುಡಿಯುವ ನೀರಿನ ಯೋಜನೆ ಅನುಷ್ಠಾನಕ್ಕೆ ತಂದು ಆಧುನಿಕ ಭಗೀರಥ ಎಂಬ ಖ್ಯಾತಿಗೆ ಪಾತ್ರರಾದರು. ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾಗಿ, ಲಕ್ಷ್ಮೇಶ್ವರ ತಾಲೂಕು ರಚನೆಯಲ್ಲಿ ಮಹತ್ವ ಪಾತ್ರ ವಹಿಸಿದ್ದರು. ಕ್ಷೇತ್ರ ವ್ಯಾಪ್ತಿಯಲ್ಲಿ ಜನಪರ ಕೆಲಸಗಳ ಮೂಲಕ ಕ್ಷೇತ್ರ ಅಭ್ಯುದಯಕ್ಕೆ ಶ್ರಮಿಸಿದ ಶಾಸಕರಲ್ಲಿ ಇವರು ಓರ್ವರಾಗಿದ್ದಾರೆ.

## ಡಿವೈಎಸ್‌ಪಿ ಮುರ್ತುಜಾ ಖಾದ್ರಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನೂತನ ಡಿವೈಎಸ್‌ಪಿಯಾಗಿ ಅಧಿಕಾರ ಸ್ವೀಕರಿಸಿದ ಮುರ್ತುಜಾ ಖಾದ್ರಿಯವರಿಗೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಗದಗ ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫೀ ಎಸ್.ನಾಗರಕಟ್ಟಿ, ಗದುಗಿನ ಜನತೆ ಯಾವಾಗಲೂ ಶಾಂತಿ ಪ್ರೀಯರು. ರಾಷ್ಟ್ರಮಟ್ಟದಲ್ಲಿ ಕೋಮುಸೌಹಾರ್ದತೆಗೆ ಹೆಸರುವಾಸಿಯಾಗಿರುವ ಗದಗ ಜಿಲ್ಲೆಗೆ ನೂತನ ಡಿವೈಎಸ್‌ಪಿಯಾಗಿ ಅಧಿಕಾರ ಸ್ವೀಕರಿಸಿದ್ದು, ಸಮಸ್ತ ಗದಗ ಜನತೆಯ ಪರವಾಗಿ ಹಾಗೂ ಮುಸ್ಲಿಂ ಸಮಾಜದ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಗದಗ ಜಿಲ್ಲೆಯ ರೋಣ ತಾಲೂಕಿನವನಾಗಿರುವ ನಾನು ನನ್ನ ವಿದ್ಯಾಭ್ಯಾಸವನ್ನು ಬೀದರನಲ್ಲಿ ಮುಗಿಸಿದ್ದು, ನನಗೆ ಮತ್ತು ನಮ್ಮ ಕುಟುಂಬದವರಿಗೆ ಗದಗ ಜಿಲ್ಲೆ ಬಹಳ ಹತ್ತಿರವಾಗಿದ್ದು, ಪ್ರಾಮಾಣಿಕವಾಗಿ ಗದಗ ಜಿಲ್ಲೆಯ ಜನರ ಸೇವೆ ಮಾಡಲು ನಾನು ಸದಾ ಬದ್ಧನಾಗಿರುತ್ತೇನೆ ಎಂದರು.

ಈ ಸಂದರ್ಭದಲ್ಲಿ ಧಾರವಾಡ ಜಿಲ್ಲಾ ಮತ್ತು ಗದಗ ಜಿಲ್ಲಾ ಉಸ್ತುವಾರಿ ಅಧ್ಯಕ್ಷರಾದ ಎಂ.ಡಿ. ಜಾಫರ ಢಾಲಾಯತ, ಲಾಡಸಾಬ್ ಕಿತ್ತೂರು, ಎಂ.ಎಂ. ಶಿರಹಟ್ಟಿ, ಸಲೀಂ ನರಗುಂದ, ಮುಜಮಿಲ್ ಬಳ್ಳಾರಿ, ಇಲಿಯಾಸ ಶಿರಹಟ್ಟಿ, ಎಸ್. ಎಸ್. ಖಾದ್ರಿ, ಮಹಮ್ಮದ ಹನೀಫ್ ಇರಕಲ್ಲ, ಅಲ್ಲಾಭಕ್ಷ ದೊಡ್ಡಮನಿ, ಇಸಾಕ ಇರಕಲ್ಲ, ಯೂನಸ ಖಾಜಿ, ನಾಸೀರ ನರೇಗಲ್ಲ ಮತ್ತು ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಯಾಸೀಮ ಮುಲ್ಲಾ, ಯೂನೂಸ ಮುಲ್ಲಾ, ಅಫ್ಜಲ್ ಮನಿಯಾರ ಮುಂತಾದವರು ಉಪಸ್ಥಿತರಿದ್ದರು.

## ನೇಕಾರಿಕೆ ಉದ್ಯಮ ಕುರಿತು ಕ್ಷೇತ್ರಾಧ್ಯಯನ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತೋಂಟ–ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಕಲಾ ವಿಭಾಗದ ಅಂತಿಮ ವರ್ಷದ ಸಮಾಜಶಾಸ್ತ್ರ ವಿಷಯದ ಹಾಗೂ ಅಂತಿಮ ವರ್ಷದ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಂದ ನೇಕಾರಿಕೆ ಉದ್ಯಮದ ಕ್ಷೇತ್ರಾಧ್ಯಯನ ಕುರಿತು ಪ್ರಸಿದ್ಧ ಉದ್ಯಮಿ ಬಲರಾಮ ಬಸವಾ ಅವರ ಬೆಟಗೇರಿಯ ನೇಕಾರಿಕೆ ಮಗ್ಗಗಳ ಉದ್ಯಮಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದರು.

ಉದ್ಯಮಿ ಪ್ರಸನ್ನ ಬಸವಾ ನೇಕಾರಿಕೆ ಉದ್ಯಮ ಬೆಳೆದು ಬಂದ ರೀತಿ, ಉತ್ಪಾದನೆ ಹಾಗೂ ಮಾರುಕಟ್ಟೆಗೆ ಸಂಬಂಧಿಸಿದ ವಿಷಯಗಳ ಮಾಹಿತಿ ನೀಡುತ್ತಾ, ಈ ಉದ್ಯಮವು ಪ್ರಾಚೀನ ಕಾಲದಿಂದಲೂ ಕೃಷಿಯೊಂದಿಗೇ ಬೆಳೆದು ಬಂದಿದೆ. ನೇಕಾರಿಕೆಯ ಮೂಲಕ ಸೀರೆ ಹಾಗೂ ವಿವಿಧ ಬಟ್ಟೆಗಳನ್ನು ತಯಾರಿಸುತ್ತಿದ್ದು, ಈ ಎಲ್ಲ ಉತ್ಪಾದನೆಗಳು



ದೇಶದ ವಿವಿಧ ಮಾರುಕಟ್ಟೆಗಳಿಗೆ ಪೂರೈಕೆಯಾಗುತ್ತಿರುವುದು ವಿಶೇಷವಾಗಿದೆ ಎಂದು ಹೇಳಿದರು.

ಸೀರೆ ನೇಯುವ ಕೌಶಲ್ಯಗಳ ಪ್ರಕ್ರಿಯೆ ಕುರಿತು ಸಮಗ್ರ ಮಾಹಿತಿ ನೀಡಿ, ಇಂದಿನ ತಂತ್ರಜ್ಞಾನ ಮತ್ತು ಸ್ಪರ್ಧಾತ್ಮಕ ಯುಗದಲ್ಲಿಯೂ ಈ ಉದ್ಯಮವು ಗುಣಮಟ್ಟದ ಉತ್ಪಾದನೆ ಹೊಂದಿದೆ. ಈ ಕುರಿತು ವಿದ್ಯಾರ್ಥಿಗಳು ಹೆಚ್ಚು ಅಧ್ಯಯನ ಕೈಗೊಂಡು ತಾವು ಯಶಸ್ವಿ ಉದ್ಯಮಿಯಾಗಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಸನ್ನ ಬಸವಾ, ಪ್ರೊ ಕೆ.ವಿ. ಬಾಗಲಕೋಟಿ, ಪ್ರೊ. ಆನಂದ ದೇಸಾಯಿಪಟ್ಟಿ, ಪ್ರೊ. ಶಿವಕುಮಾರ ಅಣ್ಣಿಗೇರಿ, ಪ್ರೊ. ನೇತ್ರಾ ಹೂಗಾರ ಹಾಗೂ ನೇಕಾರಿಕೆ ಉದ್ಯಮದ ಸಿಬ್ಬಂದಿ ವರ್ಗದವರಿದ್ದರು.

## ಸಂಪಾದಕೀಯ

# ಪಿಒಕೆ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ದೂರದೃಷ್ಟಿ

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸಿಐಐ (ಭಾರತೀಯ ಕೈಗಾರಿಕಾ ಒಕ್ಕೂಟ) ವಾರ್ಷಿಕ ವ್ಯವಹಾರ ಶೃಂಗಸಭೆ-2025 ರ ಉದ್ಘಾಟನಾ ಸಮಾರಂಭದಲ್ಲಿ ನೀಡಿದ ಭಾಷಣವು ಕೇವಲ ರಾಜಕೀಯ ಹೇಳಿಕೆಯಾಗಿರದೆ, ಭಾರತದ ಅವಿಭಜಿತ ದೃಷ್ಟಿಕೋನ ಮತ್ತು ಭವಿಷ್ಯದ ಆಕಾಂಕ್ಷೆಯ ಪ್ರತಿಧ್ವನಿಯಾಗಿತ್ತು.

ವಿಶೇಷವಾಗಿ ಪಾಕ್ ಆಕ್ರಮಿತ ಕಾಶ್ಮೀರ (ಪಿಒಕೆ) ಕುರಿತ ಅವರ ಮಾತುಗಳು, ಆ ಪ್ರದೇಶದ ಜನರ ಬಗೆಗಿನ ಭಾರತದ ಕಾಳಜಿ ಮತ್ತು ಅವರನ್ನು ಮುಖ್ಯವಾಹಿನಿಗೆ ತರುವ ಬದ್ಧತೆಯನ್ನು ಸ್ಪಷ್ಟಪಡಿಸಿದವು. ಆಪರೇಷನ್ ಸಿಂಧೂರ್ ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಿದೆ ಎಂಬ ಅವರ ಪುನರುಚ್ಚಾರವು ರಾಷ್ಟ್ರೀಯ ಭದ್ರತೆಗೆ ಭಾರತ ನೀಡುವ ಆದ್ಯತೆಯನ್ನು ತೋರಿಸುತ್ತದೆ.

ಸಿಂಗ್ ಅವರ ಭಾಷಣದ ಪ್ರಮುಖ ಅಂಶವೆಂದರೆ, ಪಿಒಕೆ ನಿವಾಸಿಗಳು ಭಾರತಕ್ಕೆ ಸೇರಿರುವವರು ಮತ್ತು ಒಂದು ದಿನ ಅವರು ಸ್ವಯಂಪ್ರೇರಿತವಾಗಿ ಭಾರತದ ಮುಖ್ಯವಾಹಿನಿಗೆ ಮರಳುತ್ತಾರೆ ಎಂಬ ದೃಢ ವಿಶ್ವಾಸ. ಅಲ್ಲಿನ ಅನೇಕ ಜನರು ಭಾರತದೊಂದಿಗೆ ಸಂಪರ್ಕ ಹೊಂದಿದ್ದಾರೆ, ಆದರೆ ಕೆಲವರು ಅವರನ್ನು ದಾರಿ ತಪ್ಪಿಸಿದ್ದಾರೆ ಎಂಬ ಅವರ ಮಾತುಗಳು, ಪಿಒಕೆ ಜನರ ನಿಜವಾದ ಮನಸ್ಥಿತಿಯನ್ನು ಅರ್ಥಮಾಡಿಕೊಳ್ಳುವ ಪ್ರಯತ್ನವನ್ನು ಸೂಚಿಸುತ್ತವೆ.

ಬಲವಂತಕ್ಕಿಂತ, ಸಂಸ್ಕೃತಿ, ಸಮಾಜ ಮತ್ತು ಆರ್ಥಿಕ ಯೋಗಕ್ಷೇಮದ ಮೂಲಕ ಅವರನ್ನು ಭಾರತದೊಂದಿಗೆ ಮರಳಿ ಬೆಸೆಯುವ ದೃಷ್ಟಿಕೋನವು ಶ್ಲಾಘನೀಯ. ಇದು ಬಲವಂತದ ಏಕೀಕರಣಕ್ಕಿಂತ ಸಾಮರಸ್ಯದ ಮರುಸಂಪರ್ಕಕ್ಕೆ ಒತ್ತು ನೀಡುತ್ತದೆ.

ಏಕ್ ಭಾರತ್ ಶ್ರೇಷ್ಠ ಭಾರತ್ ಎಂಬ ಸಂಕಲ್ಪಕ್ಕೆ ಬದ್ಧರಾಗಿರುವ ಭಾರತ, ಭೌಗೋಳಿಕವಾಗಿ ಮತ್ತು ರಾಜಕೀಯವಾಗಿ ಬೇರ್ಪಟ್ಟಿರುವ ತಮ್ಮ ಸಹೋದರರು ತಮ್ಮ ಸ್ವಾಭಿಮಾನ ಮತ್ತು ಆತ್ಮ ಧ್ವನಿಯೊಂದಿಗೆ ಭಾರತದ ಮುಖ್ಯವಾಹಿನಿಗೆ ಮರಳುವ ದಿನ ದೂರವಿಲ್ಲ ಎಂದು ನಂಬುತ್ತದೆ. ಇದು ಕೇವಲ ಪ್ರಾದೇಶಿಕ ಸಮಗ್ರತೆಯ ಪ್ರಶ್ನೆಯಲ್ಲ, ಬದಲಿಗೆ ಶತಮಾನಗಳಿಂದಲೂ ಒಂದೇ ಸಂಸ್ಕೃತಿ ಮತ್ತು ಇತಿಹಾಸವನ್ನು ಹಂಚಿಕೊಂಡಿರುವ ಜನರ ಭಾವನಾತ್ಮಕ ಮರುಸಂಪರ್ಕದ ವಿಷಯವಾಗಿದೆ.

ಭಾರತವು ಯಾವಾಗಲೂ ಉತ್ತಮ ಸಂಬಂಧಗಳನ್ನು ಬಯಸುತ್ತದೆ ಮತ್ತು ಶಾಂತಿಯ ಮಾರ್ಗದಲ್ಲಿ ನಡೆಯುತ್ತದೆ. ಆದರೆ, ರಾಷ್ಟ್ರೀಯ ಭದ್ರತೆ ಮತ್ತು ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಅದು ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂಬುದಕ್ಕೆ 'ಆಪರೇಷನ್ ಸಿಂಧೂರ್' ಒಂದು ಉದಾಹರಣೆ.

ಪಿಒಕೆ ಕುರಿತ ಭಾರತದ ನಿಲುವು ಕೇವಲ ಭೂಪ್ರದೇಶವನ್ನು ಮರಳಿ ಪಡೆಯುವುದಕ್ಕಿಂತ ಹೆಚ್ಚಾಗಿ, ಅಲ್ಲಿನ ಜನರ ಯೋಗಕ್ಷೇಮ ಮತ್ತು ಅವರನ್ನು ಭಾರತದ ವಿಶಾಲ ಕುಟುಂಬಕ್ಕೆ ಮರಳಿ ತರುವ ಬದ್ಧತೆಯಾಗಿದೆ ಎಂಬುದನ್ನು ಇದು ಸ್ಪಷ್ಟಪಡಿಸುತ್ತದೆ.

### ಗದಗ ಜಿಲ್ಲೆಯಲ್ಲಿಯೂ ಕಾರ್ಮಿಕರ ಅನುಕೂಲಕ್ಕಾಗಿ ಸಂಚಾರಿ ವಾಹನ

# ಕಾರ್ಮಿಕರಿಗೆ ಆರೋಗ್ಯ ಸೇವೆಗಳು



ಕರ್ನಾಟಕ ರಾಜ್ಯದಲ್ಲಿ ಹಲವಾರು ಯೋಜನೆಗಳನ್ನು ಜನರಿಗೋಸ್ಕರ ರೂಪಿಸಲಾಗಿದೆ ಮತ್ತು ಕಾರ್ಯರೂಪಕ್ಕೆ ತಂದು ಸಾರ್ವಜನಿಕರ ಸೇವೆಗೆ ಲಭ್ಯವಾಗಿವೆ. ಅದರಂತೆ ಈಗ ಆರೋಗ್ಯ ಸೇಯಲ್ಲಿ ಆರೋಗ್ಯ ಸಂಚಾರಿ ವಾಹನ ಸೇವೆ ಗದಗ ಜಿಲ್ಲೆಯಲ್ಲಿ ಪ್ರಾರಂಭವಾಗಿದೆ. ಇದು ಆರೋಗ್ಯ ಸೇವೆಯಲ್ಲಿ ಕಾರ್ಮಿಕರಿಗೆ ಅತ್ಯಂತ ತುರ್ತು ಸೇವೆ ಒದಗಿಸುವಲ್ಲಿ ಪ್ರಮುಖ ಪಾತ್ರವಹಿಸಲಿದೆ. ಸ್ಥಳಿಯ ಗದಗ ನಗರದ ಕಾರ್ಮಿಕ ವರ್ಗದವರಿಗೆ ಕೆಲಸ ಮಾಡುವ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸಿದರೆ, ಕೂಡಲೇ ಸಂಚಾರಿ ವಾಹನಕ್ಕೆ ಕರೆ ಮಾಡಿದರೆ ಪ್ರಾಥಮಿಕ ಚಿಕಿತ್ಸೆ ಒದಗಿಸುವ ಕಾರ್ಯವನ್ನು ಇನ್ನುಮುಂದೆ ಸ್ಥಳದಲ್ಲಿಯೇ ಮಾಡಲಿದೆ.

ಮೇ 8ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ದೇಶನದಲ್ಲಿ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರಿಂದ ಕಾರ್ಮಿಕರ ಆರೋಗ್ಯ ರಕ್ಷಣೆ ಆಗುತ್ತಿದೆ. ಕಾರ್ಮಿಕರ ಆರೋಗ್ಯ ರಕ್ಷಣೆಯನ್ನೇ ಮುಖ್ಯ ಗುರಿಯಾಗಿಟ್ಟುಕೊಂಡು ಅವರಿಗೆ ಆರೋಗ್ಯ ಸೇವೆಯನ್ನು ಒದಗಿಸುವುದಕ್ಕಾಗಿ ಕಾರ್ಮಿಕರ ಆರೋಗ್ಯ ಸೇವೆಗಾಗಿ ಸಂಚಾರಿ ವಾಹನ ಲೋಕಾರ್ಪಣೆಗೊಳಿಸಲಾಗಿದೆ. ಕಾರ್ಮಿಕರಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅವರಿದ್ದ ಕಡೆಗೇ ಈ ವಾಹನವು ಸಂಚರಿಸಿ ಅವರಿಗೆ ಆರೋಗ್ಯ ಸೇವೆ ಒದಗಿಸಲಿದೆ. ಈ ಯೋಜನೆಯಿಂದಾಗಿ ಕಾರ್ಮಿಕರು ಹರ್ಷ ವ್ಯಕ್ತಪಡಿಸುತ್ತಾರೆ.

ಆರೋಗ್ಯವೇ ಭಾಗ್ಯ ಎಂಬ ನಾಣ್ಣುಡಿಯಂತೆ, ಗದಗ ನಗರದಲ್ಲಿ ಗದಗ-ಮಲ್ಲಸಮುದ್ರ ರಸ್ತೆಯ ಸರಕಾರಿ ಆಸ್ಪತ್ರೆಯಲ್ಲಿ ಹತ್ತು ಹಲವಾರು ಆರೋಗ್ಯ ಸೇವೆಗಳು ಲಭ್ಯವಿದೆ. ಕಾರ್ಮಿಕರ ಆರೋಗ್ಯ ರಕ್ಷಣೆ ಹಿತದೃಷ್ಟಿಯಿಂದ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಕಾರ್ಮಿಕ ಇಲಾಖೆಯ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಒದಗಿಸುವ ವಾಹನವನ್ನು ಲೋಕಾರ್ಪಣೆಗೊಳಿಸಲಾಗಿದೆ. ಈ ಹಿಂದೆ ಅರಬೈಲ್ ಶಿವರಾಂ ಹೆಬ್ಬಾರ ಅವರು ಕಾರ್ಮಿಕ ಸಚಿವರಾಗಿದ್ದಾಗ ಕಾರ್ಮಿಕರ ಆರೋಗ್ಯ ಸೇವೆಗಾಗಿ ವಾಹನ ಕುರಿತು ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಅದು ಈಗ ಕಾರ್ಯರೂಪಕ್ಕೆ ಬಂದಿದ್ದು, ಕಾರ್ಮಿಕರಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅವರಿದ್ದ ಕಡೆಗೇ ಈ ವಾಹನವು ಸಂಚರಿಸಿ ಅವರಿಗೆ ಆರೋಗ್ಯ ಸೇವೆ ಒದಗಿಸಲಿದೆ.

ಸರ್ಕಾರದ ಈ ಯೋಜನೆಯ ಸೌಲಭ್ಯವನ್ನು ಎಲ್ಲ ಕಾರ್ಮಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರ ಆಶಯವಾಗಿದೆ.

ಮಂಡಳಿಯ ಕಾರ್ಯದರ್ಶಿಯ ಅಥವಾ ಮಂಡಳಿಯ ಪರವಾಗಿ ನೇಮಕವಾದ ಅಧಿಕೃತ ಅಧಿಕಾರಿಗಳು ನೋಂದಾಯಿತ ಫಲಾನುಭವಿ ಮತ್ತು ಅವರ ಅವಲಂಬಿತರು ರಾಜ್ಯ ಸರ್ಕಾರದ ಯಾವುದೇ ವಿಮೆ ಯೋಜನೆ ಅಡಿಯಲ್ಲಿ ಗುರುತಿಸಲ್ಪಟ್ಟ ಆಸ್ಪತ್ರೆಗಳಲ್ಲಿ ಅಥವಾ ಕರ್ನಾಟಕ ಸರ್ಕಾರಿ ನೌಕರರ ವೈದ್ಯಕೀಯ ಹಾಜರಾತಿ ನಿಯಮಗಳು, 1963ರ ಷೆಡ್ಯೂಲ್-1ರಲ್ಲಿ ನಮೂದಿಸಿರುವ ಆಸ್ಪತ್ರೆಗಳಲ್ಲಿ ದಾಖಲಾದಾಗ ವೈದ್ಯಕೀಯ ಸಹಾಯಧನವನ್ನು ನೀಡಲಾಗುತ್ತದೆ. ಕನಿಷ್ಠ 48 ಗಂಟೆಗಳವರೆಗೆ ಸತತವಾಗಿ ಆಸ್ಪತ್ರೆಯಲ್ಲಿ ದಾಖಲಾದಾಗ, ವೈದ್ಯಕೀಯ ಸಹಾಯಧನವನ್ನು ನೀಡಬೇಕಾಗಿರುತ್ತದೆ. ಪ್ರತಿ ದಿನಕ್ಕೆ 300 ರೂ.ನಂತೆ ಗರಿಷ್ಠ ರೂ. 20,000ವರೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ ಎಲ್‌ಡಿ 458 ಎಲ್‌ಇಟಿ 2021 ಪ್ರಕಾರ ಮಿತಿಗೆ ಒಳಪಟ್ಟು ಸಹಾಯಧನ ಮಂಜೂರುಮಾಡಲಾಗುತ್ತದೆ.

ಮಂಡಳಿ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್ ಕಾರ್ಡ್, ದೃಢೀಕೃತ ಉದ್ಯೋಗ ದೃಡೀಕರಣ ಪತ್ರ, ಬ್ಯಾಂಕ್ ಖಾತೆಯ ಪುರಾವೆ, ಆಸ್ಪತ್ರೆಗೆ ದಾಖಲಾದ ಮತ್ತು ಬಿಡುಗಡೆಯಾದ ದಿನಾಂಕ ಹಾಗೂ ಚಿಕಿತ್ಸಾ ವೆಚ್ಚವನ್ನು ಒಳಗೊಂಡ ಬಿಲ್‌ಗಳ ವಿವರ, ಫಲಾನುಭವಿಯು/ ಅವಲಂಬಿತ ಸರ್ಕಾರಿ/ಸರ್ಕಾರದಿಂದ ಮಾನ್ಯತೆ ಪಡೆದ ಶೆಡ್ಯೂಲ್ 1ಗೆ ಸೇರಿದ ಖಾಸಗಿ ಆಸ್ಪತ್ರೆಗಳಲ್ಲಿ ಕನಿಷ್ಠ ಎರಡು ದಿನ ಒಳರೋಗಿಯಾಗಿ ದಾಖಲೆಯಾಗಿರುವ ಬಗ್ಗೆ ವೈದ್ಯಕೀಯ ದಾಖಲೆಯನ್ನು ಸಲ್ಲಿಸಬೇಕು.

ನಮೂನೆ 22 ಎ ಆಸ್ಪತ್ರೆಯಿಂದ ಬಿಡುಗಡೆಯಾದ ದಿನಾಂಕದಿಂದ ಆರು ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸುವುದು, ಅರ್ಜಿದಾರರು ಮಂಡಳಿಯ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸಬೇಕಾಗುತ್ತದೆ.

**- ರಾಘವೇಂದ್ರ ಶಾಂತಗೀರಿ.**
**ಅಪ್ರೆಂಟಿಸ್, ವಾರ್ತಾ ಮತ್ತು ಸಾ.ಸಂ. ಇಲಾಖೆ.**

## ಮಂಗಳೂರು ಹದಗೆಟ್ಟ ಪರಿಸ್ಥಿತಿ ಹಿನ್ನಲೆ | ಸ್ಪೀಕರ್ ಯುಟಿ ಖಾದರ್, ಉಸ್ತುವಾರಿ ಸಚಿವ ಗುಂಡೂರಾವ್‌ರನ್ನು ಹೊರಗಿಟ್ಟು ಸಭೆ ನಡೆಸಿದ ಸಿಎಂ

■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ಮಂಗಳೂರು ಕಾಂಗ್ರೆಸ್ ಶಾಸಕ, ಸ್ಪೀಕರ್ ಯು.ಟಿ. ಖಾದರ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರನ್ನು ಹೊರಗಿಟ್ಟು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿರಿಯ ಕಾಂಗ್ರೆಸ್ ನಾಯಕ ಬಿ.ಕೆ. ಹರಿಪ್ರಸಾದ್ ಅವರೊಂದಿಗೆ ಗುರುವಾರ ಸಭೆ ನಡೆಸಿದ್ದು ಇದೀಗ ಭಾರಿ ಕುತೂಹಲ ಮೂಡಿಸಿದೆ.

ಮಂಗಳೂರು ಹದಗೆಟ್ಟ ಪರಿಸ್ಥಿತಿ ಹಿನ್ನಲೆದಕ್ಷಿಣ ಕನ್ನಡ ಜಿಲ್ಲೆಯ ಹದಗೆಟ್ಟ ಪರಿಸ್ಥಿತಿಯ ಹಿನ್ನಲೆ ಈ ಸಭೆ ನಡೆದಿದೆ ಎನ್ನಲಾಗಿದ್ದು, ಸಭೆಯಲ್ಲಿ ಕರಾವಳಿಯ ಪ್ರಸ್ತುತ ಪರಿಸ್ಥಿತಿಯ ಕುರಿತು ಮುಖ್ಯಮಂತ್ರಿ ಗಂಭೀರ ಚರ್ಚೆ ನಡೆಸಿದ್ದಾರೆ ಎಂದು ವರದಿಯಾಗಿದೆ. ಈ ಸಭೆಯಲ್ಲಿ ಸಚಿವ ಝಮೀರ್ ಅಹ್ಮದ್ ಕೂಡಾ ಭಾಗವಹಿಸಿದ್ದರು.

# ಕೀನ್ಯಾದ ಕ್ರಾಂತಿಕಾರಿ ಲೇಖಕ, ಹೋರಾಟಗಾರ ಗೂಗಿ ವಾ ಥಿಯೊಂಗೊ ನಿಧನ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಸ್ವಾತಂತ್ರ್ಯಾ ನಂತರದ ರಾಜಕೀಯ ಪ್ರಮುಖರ ಕಟು ಟೀಕೆಗಳ ಕಾರಣಕ್ಕೆ ಜೈಲು ಮತ್ತು ಎರಡು ದಶಕಗಳ ಗಡಿಪಾರು ಶಿಕ್ಷೆಗೆ ಗುರಿಯಾಗಿದ್ದ ಕೀನ್ಯಾದ ಪ್ರಸಿದ್ಧ ಕಾದಂಬರಿಕಾರ ಹಾಗೂ ನಾಟಕಕಾರ ಗೂಗಿ ವಾ ಥಿಯೊಂಗೊ ಅವರು ತನ್ನ 87ನೇ ವಯಸ್ಸಿನಲ್ಲಿ ಅಮೆರಿಕದ ಅಟ್ಲಾಂಟ್ಲಾದಲ್ಲಿ ನಿಧನರಾಗಿದ್ದಾರೆ.

ಈ ವಿಚಾರವನ್ನು ಕೀನ್ಯಾದ ಅಧ್ಯಕ್ಷ ವಿಲಿಯಂ ರುಟೊ ಮತ್ತು ಗೂಗಿ ಅವರ ಮಗಳು ವಾಂಜಿಕು ವಾ ಥಿಯೊಂಗೊ ಖಚಿತಪಡಿಸಿದ್ದಾರೆ.

ಬ್ರಿಟನ್‌ನಿಂದ ಸ್ವಾತಂತ್ರ್ಯಕ್ಕಾಗಿ ನಡೆದ ಸಶಸ್ತ್ರ 'ಮೌ ಮೌ' ಹೋರಾಟದಲ್ಲಿ ಪಾಲ್ಗೊಂಡಿದ್ದ, ಅದರಲ್ಲೇ ರೂಪುಗೊಂಡ ಥಿಯೊಂಗೊ ಅವರು, ತಮ್ಮ ಬರಹಗಳಲ್ಲಿ ವಸಾಹತುಶಾಹಿ ಆಳ್ವಿಕೆ ಮತ್ತು ಅದರ ಅನೇಕ ಸವಲತ್ತುಗಳನ್ನು ಪಡೆದ ಕೀನ್ಯಾದ ನಾಯಕರನ್ನು ಕಟುವಾಗಿ ಟೀಕಿಸುತ್ತಿದ್ದರು.

### ಶಿಗ್ಗಾವಿ ಕ್ಷೇತ್ರದಲ್ಲಿ ಜೂಜಾಟ, ಓಸಿ ನಿಲ್ಲಿಸಲು ಒತ್ತಾಯ

# ಡಿಜಿಪಿ, ಎಸ್ಪಿಗೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಕಳೆದ ಆರೇಳು ತಿಂಗಳಿನಿಂದ ಶಿಗ್ಗಾವಿ ತಾಲೂಕಿನಲ್ಲಿ ಜೂಜಾಟ, ಓಸಿ ಅಲ್ಲದೇ ಡ್ರಗ್ ಸೇವನೆ ಹೆಚ್ಚಾಗಿರುವ ಸುದ್ದಿ ಬರುತ್ತಿವೆ. ಒಂದು ಸುಸಂಸ್ಕೃತ ಕ್ಷೇತ್ರವನ್ನು ಜೂಜುಗಾರರ ಕ್ಷೇತ್ರವಾಗಿ ಪರಿವರ್ತನೆ ಆಗುತ್ತಿರುವುದು ನನಗೆ ದುಖ ತಂದಿದೆ. ಎಲ್ಲ ಚಟುವಟಿಕೆಗಳಿಗೆ ಪೊಲೀಸರು ಸಾಥ್ ಕೊಡುತ್ತಿದ್ದಾರೆ ಎಂಬ ಮಾತುಗಳು ಕೇಳಿ ಬಂದಿದೆ. ಈ ಅಕ್ರಮದಲ್ಲಿ ಭಾಗಿಯಾಗಿರುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಡಿಜಿಪಿ ಹಾಗೂ ಹಾವೇರಿ ಎಸ್ಪಿ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಲವಾರು ಬಾರಿ ಜೂಜಾಟದಲ್ಲಿ ಕೆಲವರು ಸಿಕ್ಕರೂ ಕೂಡ ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಇದರಲ್ಲಿ ಇದುವರೆಗೆ ಎರಡು ಪ್ರಕರಣಗಳು ಜೂಜುಕೋರರ ಮೇಲೆ ದಾಖಲಾಗಿದ್ದು, ಯಾರೊಬ್ಬರನ್ನು ಬಂಧಿಸದೇ ನಕಲಿ ಎಫ್ ಐ ಆರ್ ದಾಖಲಿಸಿದ್ದಾರೆ ಹಾಗೂ ಮೊನ್ನೆ ಶಿಗ್ಗಾವಿ ಡಿ ವಾಯ್ ಎಸ್ ಪಿ ನಾಲ್ಕು ಜನ ಗಾಂಜಾ ಮಾರುವವರನ್ನು ಕರೆತಂದು ಪ್ರಕರಣ ದಾಖಲಿಸದೆ ಸುಮ್ಮನೆ ಬಿಟ್ಟು ಕಳುಹಿಸಿದ್ದಾರೆ ಎಂಬ ಮಾಹಿತಿ ಇದೆ. ಅದಕ್ಕೆ ಸ್ಥಳೀಯ ಶಾಸಕರ ಆಪ್ತರು ಮತ್ತು ಆಶ್ರಯ ಸಮಿತಿ ಸದಸ್ಯರು ಈ ಜೂಜಾಟ ಆಡಿಸುತ್ತಿದ್ದಾರೆ ಎನ್ನುವ ಮಾಹಿತಿಯನ್ನು ಮಾಧ್ಯಮದಲ್ಲಿ ಸೆರೆ ಹಿಡಿದಿದ್ದಾರೆ ಇದನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ. ಯಾರ ಮೇಲೆ ಎಫ್ ಐ ಆರ್ ಆಗಿದೆ ಅವರನ್ನು ತಕ್ಷಣವೇ ಬಂಧಿಸಿ ಅವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಬೊಮ್ಮಾಯಿ ಒತ್ತಾಯಿಸಿದ್ದಾರೆ.

ಹುಬ್ಬಳ್ಳಿಯ ಸಿಸಿಬಿ ಪೊಲೀಸರು ಬಿಸ್ನಳ್ಳಿ ಬಳಿ 50 ಕೆಜಿ ಗಾಂಜಾ ಸಿಕ್ಕಿದ್ದನ್ನು ಕೇವಲ 10 ಕೆಜಿ ಎಂದು ತೋರಿಸಿದ್ದಾರೆ ಎಂದು ಕೇಸುಗಳ ಮುಖಾಂತರ ಗೊತ್ತಾಗುತ್ತಿದೆ. ಕೂಡಲೆ ತಾಲೂಕಿನಲ್ಲಿ ಓಸಿ, ಜೂಜಾಟ ಗಾಂಜಾ ಸೇವನೆ ನಿಲ್ಲಿಸಬೇಕು. ಆರೋಪಿಗಳು ಎಷ್ಟೇ ದೊಡ್ಡವರಿದ್ದರೂ ರಾಜಕೀಯ ಒತ್ತಡಕ್ಕೆ ಮಣಿಯದೆ ಎಲ್ಲರನ್ನು ಬಂದಿಸಬೇಕು, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ಲದೇ ಈ ಅಕ್ರಮದಲ್ಲಿ ಯಾರು ಭಾಗಿಯಾಗಿದ್ದಾರೆ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಡಿಜಿಪಿ ಹಾಗೂ ಹಾವೇರಿ ಎಸ್ಪಿ ಅವರಿಗೆ ಆಗ್ರಹಿಸುತ್ತೇನೆ ಎಂದು ತಿಳಿಸಿದ್ದಾರೆ.

# ಅಪರಿಚಿತ ವಾಹನ ಡಿಕ್ಕಿ ಹೊಡೆದು ವ್ಯಕ್ತಿ ಸಾವು ಪ್ರಕರಣ: ಇನ್ನೂ ಪತ್ತೆಯಾಗದ ವಾರಸುದಾರರು!

■ ವಿಜಯಸಾಕ್ಷಿ ಸುದ್ದಿ, ಗದಗ



ರಸ್ತೆ ಅಪಘಾತದಲ್ಲಿ ಮೃತಪಟ್ಟ ಅಪರಿಚಿತ ವ್ಯಕ್ತಿಯೊಬ್ಬನ ವಾರಸುದಾರ ಪತ್ತೆಗೆ ಗದಗ ಗ್ರಾಮೀಣ ಪೊಲೀಸರು ಪ್ರಕಟಣೆ ಹೊರಡಿಸಿದ್ದು, ಯಾರಿಗಾದರೂ ಗೊತ್ತಾದರೆ ಗ್ರಾಮೀಣ ಪೊಲೀಸ್ ಠಾಣೆ ಗದಗ. ದೂರವಾಣಿ ಸಂಖ್ಯೆ:08372-278213, ಮೊಬೈಲ್ ನಂ. 9480804431 ಅಥವಾ ಗದಗ ಕಂಟ್ರೋಲ್ ರೂಂ-08372-238300 ಹಾಗೂ ಮೊಬೈಲ್ ನಂ.9480804400 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 2024ರ ಅಕ್ಟೋಬರ್ 13ರಂದು ಬೆಳಗಿನ ಜಾವ ರೋಣ ರಸ್ತೆಯ ಮ್ಯಾಪಲ್ಸ್ ಸಿರಾಮಿಕ್ಸ್ ಟೈಲ್ಸ್ ಫ್ಯಾಕ್ಟರಿ ಬಳಿ ರಸ್ತೆಯಲ್ಲಿ ನಡೆದುಕೊಂಡು ಹೊರಟಿದ್ದ ವ್ಯಕ್ತಿಯೊಬ್ಬನಿಗೆ ಅಪರಿಚಿತ ವಾಹನವೊಂದು ಡಿಕ್ಕಿ ಹೊಡೆದ ಪರಿಣಾಮವಾಗಿ ಆತ ಸ್ಥಳದಲ್ಲೇ ಮೃತಪಟ್ಟಿದ್ದ. ಆ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ವಾಹನ ಸಮೇತ ಪರಾರಿಯಾಗಿದ್ದ ಚಾಲಕನ ವಿರುದ್ಧ ಗುನ್ನಾ ನಂ.198/2024ರಂತೆ ಪ್ರಕರಣ ದಾಖಲಾಗಿತ್ತು.

## ಕಚ್ಚಾರಿ ತಾರಕೇಶ್ ಅವರಿಗೆ ಸಾರಿಗೆ ರತ್ನ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ



ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ನೌಕರರ ಸಂಘದ ರಾಜ್ಯ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಗದಗ ವಿಭಾಗದ ಕಚ್ಚಾರಿ ತಾರಕೇಶ್ ಅವರಿಗೆ 2025ನೇ ಸಾಲಿನ ಸಾರಿಗೆ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಂಘದ ರಾಜ್ಯ ಗೌರವ ಅಧ್ಯಕ್ಷ ಮಾವಳ್ಳಿ ಶಂಕರ, ಎಫ್.ಟಿ. ಚಿಕ್ಕಪ್ಪನವರ್, ರವಿಪ್ರಕಾಶ್ ಎಂ. ಇದ್ದರು. ಮೇ 31ರಂದು. ಕಚ್ಚಾರಿ ತಾರಕೇಶ್ ಅವರು ಸೇವಾ ನಿವೃತ್ತಿ ಹೊಂದಲಿದ್ದಾರೆ.

## ಜೂ. 1ರಂದು ಪ್ರವೇಶ ಪರೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿನಲ್ಲಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರು/ಉಪನ್ಯಾಸಕರ ಹುದ್ದೆಗಳಿಗೆ ಜೂನ್ 1 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಜೂನ್ 1 ರಂದು ಬೆಳಿಗ್ಗೆ11:00 ರಿಂದ ಮಧ್ಯಾಹ್ನ 1:00ರ ವರೆಗೆ ಗದಗ ತಾಲೂಕಿನ ಮಲ್ಲಸಮುದ್ರ ಗ್ರಾಮದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಜಿಲ್ಲಾ ಆಸ್ಪತ್ರೆ ಹಿಂದುಗಡೆ, ಮಲ್ಲಸಮುದ್ರ ತಾ.ಜಿ. ಗದಗ ಇಲ್ಲಿ ಪರೀಕ್ಷೆ ನಡೆಯಲಿದೆ. ಅಭ್ಯರ್ಥಿಗಳು ಜಿಲ್ಲಾ ಕಚೇರಿಯಲ್ಲಿ ಪ್ರವೇಶ ಪತ್ರ ಪಡೆದು ಪರೀಕ್ಷೆಗೆ ಹಾಜರಾಗಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.



ಮುಳಗುಂದ ಪಟ್ಟಣದ ಸರಕಾರಿ ಪ್ರೌಢಶಾಲೆಯ (ಆರ್‌ಎಂಎಸ್‌ಎ) ವಿದ್ಯಾರ್ಥಿಗಳಿಗೆ 2025/26ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪಠ್ಯ ಪುಸ್ತಕವನ್ನು ಎಸ್‌ಡಿಎಂಸಿ ಅಧ್ಯಕ್ಷ ಮಾಹಾದೇವಪ್ಪ ಮಾನೆಗಾರ ವಿತರಿಸಿದರು. ಶಾಲಾ ಪ್ರಧಾನ ಗುರು ಶರಣು ಪುಜಾರ, ಎಲ್.ಡಿ. ರಾಠೋಡ, ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಜಿ.ಆರ್. ಕುಂದರಗಿ, ಎಸ್.ವಿ. ತಿಮ್ಮಾಪೂರ, ಬಸವರಾಜ ಗೌರಿಮನಿ ಇದ್ದರು.

# ಮೃತ ಮಾಜಿ ಸೈನಿಕನಿಗೆ ಗೌರವ ನಮನ



■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ನಿವಾಸಿ, ಮಾಜಿ ಸೈನಿಕ ಭೀಮಪ್ಪ ಎಮ್ಮಿ ತಮ್ಮ 61ನೇ ವಯಸ್ಸಿನಲ್ಲಿ ನಿಧನರಾದರು. ಮೃತರು ಪತ್ನಿ, ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಬಿಟ್ಟು ಅಗಲಿದ್ದಾರೆ. ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ ಹಾಗೂ ಕೊಪ್ಪಳ ಜಿಲ್ಲಾ ಮಾಜಿ ಸೈನಿಕರ ಸಂಘದ ಸಹಯೋಗದಲ್ಲಿ ರಾಷ್ಟ್ರಧ್ವಜದೊಂದಿಗೆ ಗೌರವವನ್ನು ಸಮರ್ಪಿಸಲಾಯಿತು.

ಮಾರುತಿ ಗೊಂದಿ, ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಉಪಾಧ್ಯಕ್ಷ ಎಸ್.ಆರ್. ಪಾಟೀಲ್, ಹಿರಿಯರಾದ ಎಸ್.ಜಿ. ಕಲ್ಲಳ್ಳಿ ಗೌರವ ವಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಸೈನಿಕರಾದ ಸಿದ್ದಯ್ಯ ಹಿರೇಮಠ, ವೀರಪ್ಪ ಬಿಂಗಿ, ಶರಣಪ್ಪ ಮಡಿವಾಳ, ವಿಜಯ ಗಾಜಿ, ವಿಜಯಕುಮಾರ ಬಡಿಗೇರ, ನಾಗರಾಜ್ ಹಂಚಿನಾಳ, ರೈತ ಸಂಘ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಶರಣಪ್ಪ ಜೋಗಿನ, ಮಲ್ಲಿಕಾರ್ಜುನ್ ಇದ್ಲಿ, ರಾಮಣ್ಣ ಕುರುಡಗಿ ಮುಂತಾದವರು ಪಾಲ್ಗೊಂಡಿದ್ದರು.

## ಸವಿತಾ ಜಮ್ಮನಕಟ್ಟಿಯವರಿಗೆ ಪಿಎಚ್‌ಡಿ

■ ವಿಜಯಸಾಕ್ಷಿ ಸುದ್ದಿ, ವಿಜಯಪುರ



ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ಸವಿತಾ ವಿ.ಜಮ್ಮನಕಟ್ಟಿ ಅವರು 'ಇವ್ಯಾಲ್ಯುಯೇಷನ್ ಆಫ್ ನ್ಯೂಟ್ರಾಸ್ಯುಟಿಕಲ್ ಆಂಡ್ ಬಯೋಲಾಜಿಕಲ್ ಪ್ರಾಪರ್ಟೀಸ್ ಆಫ್ ಕೆರೇಷಿಯ ಮೊಲ್ಲಿಸ್ಸಿಮ-ಯಾನ್ ಎಂಡೇಜರ್ಡ್ ಸ್ಪೀಷೀಸ್ ಆಫ್ ವೆಸ್ಟರ್ನ್ ಘಾಟ್ಸ್ ಆಫ್ ಇಂಡಿಯಾ' ಕುರಿತು ಸಲ್ಲಿಸಿದ್ದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಿದೆ.

ಸವಿತಾ ವಿ.ಜಮ್ಮನಕಟ್ಟಿ ಅವರು ಆಹಾರ ಸಂಸ್ಕರಣೆ ಮತ್ತು ಪೋಷಣೆ ವಿಭಾಗದ ಪ್ರಾಧ್ಯಾಪಕ ಮತ್ತು ಶಿವಮೊಗ್ಗ ಜಿಲ್ಲೆಯ ಉಡತಡಿ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ವಿಶೇಷಾಧಿಕಾರಿ ಡಾ. ಪ್ರಶಾಂತ್ ಎಸ್.ಜೆ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ಸವಿತಾ ಜಮ್ಮನಕಟ್ಟಿ ಅವರನ್ನು ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ ಅಭಿನಂದಿಸಿದ್ದಾರೆ.

# ಬಸವೇಶ್ವರ ಮಹಾವಿದ್ಯಾಲಯದಲ್ಲಿ ವಾರ್ಷಿಕ ಕ್ರೀಡಾಕೂಟ




■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ವಿದ್ಯೆಯೊಂದಿಗೆ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಉತ್ತಮ ಆರೋಗ್ಯ, ಸಾತ್ವಿಕ ಮನಸ್ಸು ಮತ್ತು ಬೌದ್ಧಿಕ ವಿಕಾಸವನ್ನು ಹೊಂದಲು ಸಾಧ್ಯ. ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಕ್ರೀಡಾ ನಿಯಮಗಳನ್ನು ಪಾಲಿಸುತ್ತಾ ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಬೇಕೆಂದು ಪ್ರಾಚಾರ್ಯ ಎಂ.ಎಂ. ಬುರುಡಿ ಹೇಳಿದರು.

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಪ್ರಸಕ್ತ ಸಾಲಿನ ವಾರ್ಷಿಕೋತ್ಸವದ ಅಂಗವಾಗಿ ಮೇ. 29ರಿಂದ ಜೂನ್ 2ರವರೆಗೆ ನಡೆಯಲಿರುವ ವಾರ್ಷಿಕ ಕ್ರೀಡಾಕೂಟವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾರಂಭದಲ್ಲಿ ಮಹಾವಿದ್ಯಾಲಯದ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕೆ.ವಿ. ಬಾಗಲಕೋಟಿ ಸ್ವಾಗತಿಸಿ ವಂದಿಸಿದರು.

## ಪಾಠೋಪಕರಣ ವಿತರಣೆ ಜೂ.1ಕ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಕ್ಷಕ ಬಳಗದಿಂದ ಪಟ್ಟಣದ ನಿವೃತ್ತ ಶಿಕ್ಷಕಿ ಸಾವಿತ್ರಮ್ಮ ಶಂಕ್ರಪ್ಪ ನೇಕಾರ (ಗುಡಗೇರಿ) ಅವರ ಅಮೃತಮಹೋತ್ಸವ ಕಾರ್ಯಕ್ರಮದ ಅಂಗವಾಗಿ ರಾಮಗೇರಿ ಶಾಲೆಗೆ ಪಾಠೋಪಕರಣ, ವಸ್ತ್ರದಾನ ಹಾಗೂ ಸಸಿ ವಿತರಣಾ ಕಾರ್ಯಕ್ರಮವನ್ನು ಜೂ.1ರಂದು ಬೆಳಿಗ್ಗೆ 10ಕ್ಕೆ ಪಟ್ಟಣದ ಎಪಿಎಂಸಿ ವರ್ತಕರ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಸಾನ್ನಿಧ್ಯವನ್ನು ಬೈರನಹಟ್ಟಿ ಮಠದ ಶ್ರೀ ದೊರೆಸ್ವಾಮಿ ಶಾಂತಲಿಂಗ ಮಹಾಸ್ವಾಮಿಗಳು ವಹಿಸುವರು. ಅಮೃತ ಮಹೋತ್ಸವದ ಗೌರವವನ್ನು ಸಾವಿತ್ರಮ್ಮ ನೇಕಾರ (ಗುಡಗೇರಿ) ಸ್ವೀಕರಿಸುವರು. ಆರ್.ಎಸ್. ಬುರಡಿ ಕಾರ್ಯಕ್ರಮ ಉದ್ಘಾಟಿಸುವರು. ಶಾಂತಪ್ಪ ಗುಡಗೇರಿ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಶರಣ ಸಾಹಿತ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಅಭಿನಂದನಾ ನುಡಿಗಳನ್ನಾಡುವರು. ಅತಿಥಿಗಳಾಗಿ ಬಿಇಓ ಎಚ್.ಎನ್. ನಾಯಕ(ಶಿರಹಟ್ಟಿ), ಎಚ್.ಎಂ. ಪಡ್ನೇಸಿ(ಮುಂಡರಗಿ), ರಾಜ್ಯ ಪ್ರಶಸ್ತಿ ಪುರಸ್ಕೃತ ಸಾಹಿತಿ ಲಲಿತಮ್ಮ ಕೆರಿಮನಿ, ಎಂ.ಎಂ. ಹವಳದ, ಗುರುರಾಜ ಹವಳದ, ಬಿ.ಎಸ್. ಹರ್ಲಾಪುರ, ಈಶ್ವರ ಮೆಡ್ಲೇರಿ ಉಪಸ್ಥಿತರಿರುವರು ಎಂದು ಶಿಕ್ಷಕ ಬಳಗದ ಪ್ರಕಟಣೆ ತಿಳಿಸಿದೆ.

### ಆಪರೇಷನ್ ಸಿಂಧೂರ ಭಾರತದ ರಾಷ್ಟ್ರೀಯ ಗೆಲುವು, ದೇವರು ನಮ್ಮೊಂದಿಗಿದ್ದನೆಂದು ಭಾವಿಸಿ: ಐಎಎಫ್ ಜಮುಖ್ಯಸ್ಥ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪರೇಷನ್ ಸಿಂಧೂರ ಕಾರ್ಯಾಚರಣೆಯನ್ನು "ರಾಷ್ಟ್ರೀಯ ವಿಜಯ" ಎಂದು ಗುರುವಾರ ಶ್ಲಾಘಿಸಿರುವ ಐಎಎಫ್ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಅವರು, ಎಲ್ಲಾ ಭಾರತೀಯ ಪಡೆಗಳು ಅದನ್ನು ಅತ್ಯಂತ ವೃತ್ತಿಪರ ರೀತಿಯಲ್ಲಿ ಕಾರ್ಯಗತಗೊಳಿಸಲು ಒಗ್ಗೂಡಿದವು ಎಂದು ಹೇಳಿದ್ದಾರೆ.

### ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ಯೋಜನೆ

# ನೀವೂ ಉದ್ದಿಮೆದಾರರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಆತ್ಮ ನಿರ್ಭರ ಭಾರತ ಅಭಿಯಾನದ ಅಂಗವಾಗಿ ಭಾರತ ಸರ್ಕಾರವು ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಪಿ.ಎಮ್.ಎಫ್.ಎಮ್.ಇ) ಯೋಜನೆಯನ್ನು ಕಳೆದ 5 ವರ್ಷಗಳಿಂದ ಜಾರಿಗೊಳಿಸಿರುತ್ತಾರೆ. ರೈತರು ಕೃಷಿ ಉತ್ಪನ್ನಗಳನ್ನು ನೇರವಾಗಿ ಮಾರಾಟ ಮಾಡದೇ ಮೌಲ್ಯವರ್ಧನೆ, ಉತ್ಪನ್ನಗಳ ವರ್ಗೀಕರಣ, ಶ್ರೇಣೀಕರಣ, ಬ್ರ್ಯಾಂಡಿಂಗ್, ಲೇಬಲಿಂಗ್, ಮಾರುಕಟ್ಟೆಯ ಬೆಂಬಲ ಮತ್ತು ರಫ್ತಿಗೆ ಪ್ರೋತ್ಸಾಹ ನೀಡುವ ಮೂಲಕ ಅಂತಹ ವ್ಯಕ್ತಿ, ಸ್ವ-ಸಹಾಯ ಸಂಘ, ರೈತ ಉತ್ಪಾದಕರ ಸಂಸ್ಥೆಗಳ ಆದಾಯವನ್ನು ದ್ವಿಗುಣಗೊಳಿಸುವುದು ಹಾಗೂ ಅವರನ್ನು ಉದ್ದಿಮೆದಾರರಾಗಿ ರೂಪಿಸುವುದು ಮುಖ್ಯ ಉದ್ದೇಶವಾಗಿದೆ.

ಕೇಂದ್ರ ಸರ್ಕಾರದ ಶೇ. 35 ಹಾಗೂ ರಾಜ್ಯ ಸರ್ಕಾರದ ಶೇ. 15 ಸಹಾಯಧನ ಒಟ್ಟು ಶೇ. 50 ಸಹಾಯಧನ ಬ್ಯಾಂಕ್ ಮೂಲಕ ನೀಡಲು




ಅವಕಾಶವಿರುತ್ತದೆ. ವಿಸ್ತೃತ ಯೋಜನಾ ವರದಿ ತಯಾರಿಸಿ ಶೇ. 50ರಷ್ಟು ಸಹಾಯಧನ ಮತ್ತು ಉಳಿದ ಶೇ. 50 ಅನುದಾನ ಬ್ಯಾಂಕ್ ಸಾಲ ದೊರೆಯಲಿದೆ. ಈ ವರ್ಷ ಯೋಜನಾ ಅನುಷ್ಠಾನದ ಕೊನೆಯ ವರ್ಷವಾಗಿರುವುದರಿಂದ ಜಿಲ್ಲೆಯ ರೈತರು ಸದರಿ ಯೋಜನೆಯ ಹೆಚ್ಚಿನ ಲಾಭ ಪಡೆಯಲು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ ಹೆಚ್ ಕೋರಿದ್ದಾರೆ.

ಈ ಯೋಜನೆಯಡಿ ಕಿರು ಆಹಾರ ಸಂಸ್ಕರಣ ಉದ್ದಿಮೆಗಳಾದ ಬ್ಯಾಡಗಿ ಮೆಣಸಿನಕಾಯಿ ಪುಡಿ, ಹಿಟ್ಟಿನ ಗಿರಣಿಗಳು, ಎಣ್ಣೆ ಗಾಣಗಳು, ಮಿನಿ ದಾಲ್ ಮಿಲ್, ಅರಿಷಿಣ ಸಂಸ್ಕರಣೆ, ಮಸಾಲಾ ಪದಾರ್ಥಗಳು, ಸಿರಿಧಾನ್ಯಗಳಿಂದ ಉಪ ಉತ್ಪನ್ನಗಳ ತಯಾರಿಕೆ, ಶ್ಯಾವಿಗೆ, ರವಾ, ನೂಡಲ್ಸ್ ತಯಾರಿಕೆ, ಕುಕ್ಕುಟ ಉತ್ಪನ್ನಗಳು, ವಿವಿಧ ಹಣ್ಣು ಹಾಗೂ ತರಕಾರಿ ಉತ್ಪನ್ನಗಳ ಮೌಲ್ಯವರ್ಧನೆ ಹಾಗೂ ಇತರೆ ಆಹಾರ ಸಂಸ್ಕರಣಾ ಘಟಕಗಳನ್ನು ಹೊಸದಾಗಿ ಉದ್ಯಮ ಪ್ರಾರಂಭಿಸಲು ಅಥವಾ ಚಾಲ್ತಿಯಲ್ಲಿರುವ ಉದ್ಯಮಗಳನ್ನು ವಿಸ್ತರಿಸಲು ಅವಕಾಶವಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಸಮೀಪದ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ರೈತ ಸಂಪರ್ಕ ಕೇಂದ್ರಗಳಿಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ಕೃಷಿ ನಿರ್ದೇಶಕರು-ಸೀಮಾ ಸವಣೂರ-8277931425 ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ಶ್ರೀನಿವಾಸ ರಾಠೋಡ-9686641134, ಮಂಜುನಾಥ ಭರಮಗೌಡರ 9449339531, ಗೌರಿಶಂಕರ ಸಜ್ಜನ-9986789162, ಪ್ರಭಾಕರ ಹೂಗಾರ-9620624838, ಸಂತೋಷ ಜವಳಿ-9241333555, ಪ್ರಕಾಶ ಕೊಣ್ಣೂರು-9901553190, ಸುರೇಶ ಸಾವಳಗಿ-9663971865, ಕಾರ್ತಿಕ ಹಿರೇಮಠ-8748945132, ಗಿರೀಶ-9686762766 ಹಾಗೂ ಬಸಪ್ಪ ಮುಧೋಳ-8217682195 ಇವರನ್ನು ಸಂಪರ್ಕಿಸಲು ಕೋರಿದೆ.

## ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಾಲಕರು ಸರಕಾರಿ ಶಾಲೆಗೆ ಮಕ್ಕಳನ್ನು ದಾಖಲಾತಿ ಮಾಡಿಸಿ ಮಕ್ಕಳ ಭವಿಷ್ಯಕ್ಕೆ ಬುನಾದಿ ಹಾಕಬೇಕು ಎಂದು ಪ.ಪಂ ಸದಸ್ಯ ಕೆ.ಎಲ್. ಕರಿಗೌಡರ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಶಾಲಾ ಪ್ರಾರಂಭೋತ್ಸವ ಹಾಗೂ ಮಕ್ಕಳ ದಾಖಲಾತಿ ಆಂದೋಲನದಲ್ಲಿ ಮಕ್ಕಳಿಗೆ ಗುಲಾಬಿ ಹೂ ಮತ್ತು ಸಿಹಿ ನೀಡಿ ಸ್ವಾಗತಿಸಿ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ನುರಿತ ಅನುಭವಿ ಗುರುಬಳಗವಿದೆ ಹಾಗೂ ಸರಕಾರದಿಂದ ಹಲವಾರು ಯೋಜನೆಗಳ ಮೂಲಕ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಸಹಕಾರಿಯಾಗಿದ್ದು, ಪಾಲಕರು ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಿ ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಿಕ್ಷಕರಾದ ಎಂ.ಎಂ. ಮೇಗಲಮನಿ. ಕೆ.ಎಂ. ಹೆರಕಲ್, ಎಂ.ಎಂ. ಕೊಪ್ಪಳ, ಮಂಜುನಾಥ ಕಲ್ಯಾಣಮಠ, ಎಸ್.ಎಚ್. ಉಪ್ಪಾರ, ಎಚ್.ಆರ್. ಭಜೆಂತ್ರಿ, ಟಿ.ವೀಣಾ, ಎಸ್.ವಿ. ಹಿರೇಮಠ, ವಿ.ಎಂ. ಕಂಠಿ, ಎಸ್.ಡಿ. ಪಂಡಿತ, ಬಿ.ವಿ. ಸುಂಕಾಪೂರ, ಜಿ.ಎಂ. ಗಾಡಿ, ಮಂಜುನಾಥ ಗುಲಗಂಜಿ ಇದ್ದರು.

## ರಜಾ ದಿನಗಳಲ್ಲೂ ನೋಂದಣಿಗೆ ಅವಕಾಶ




■ ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಸರ್ಕಾರದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾರ್ಯಗಳನ್ನು ಸಾರ್ವಜನಿಕ ಮತ್ತು ಜನಸ್ನೇಹಿಗೊಳಿಸಲು ರಾಜ್ಯ ಸರ್ಕಾರವು ಪ್ರತಿ ತಿಂಗಳ ಎರಡನೇ ಶನಿವಾರ, 4ನೇ ಶನಿವಾರ ಮತ್ತು ಭಾನುವಾರಗಳಂದು ಜಿಲ್ಲೆಯ ನೋಂದಣಿ ಕಚೇರಿಗಳ ಪೈಕಿ ಒಂದರಲ್ಲಿ ನೋಂದಣಿ ಕಾರ್ಯ ನಿರ್ವಹಿಸಲು ಆದೇಶಿಸಿದೆ.

ಅದರಂತೆ ಧಾರವಾಡ ಜಿಲ್ಲೆಯಲ್ಲಿ ಧಾರವಾಡ, ಹುಬ್ಬಳ್ಳಿ ಉತ್ತರ, ಹುಬ್ಬಳ್ಳಿ ದಕ್ಷಿಣ, ಕಲಘಟಗಿ, ನವಲಗುಂದ, ಅಣ್ಣಿಗೇರಿ ಮತ್ತು ಕುಂದಗೋಳ ಪಟ್ಟಣ ಸೇರಿದಂತೆ ಒಟ್ಟು 7 ಉಪನೋಂದಣಿ ಕಛೇರಿಗಳಿವೆ.


ಈಗಾಗಲೇ ಜಿಲ್ಲೆಯಾದ್ಯಂತ anywhere Registration ಅಂದರೆ ಜಿಲ್ಲೆಯ ಯಾವುದೇ ಕಛೇರಿಯಲ್ಲಿ ಆದರೂ ನೋಂದಣಿ ಮಾಡಿಸಿಕೊಳ್ಳುವ ಯೋಜನೆ ಜಾರಿಯಲ್ಲಿದೆ. ಅದರಂತೆ ಸರಕಾರವು ಈಗ ತಿಂಗಳ 2ನೇ ಮತ್ತು 4ನೇ ಶನಿವಾರ ಹಾಗೂ ಎಲ್ಲಾ ಭಾನುವಾರಗಳಂದು ಜಿಲ್ಲೆಯ ಒಂದು ಉಪನೋಂದಣಿ ಕಛೇರಿ ಕಾರ್ಯನಿರ್ವಹಿಸಲು ನಿರ್ದೇಶಿಸಿದ್ದು, ಈಗಿರುವ ಧಾರವಾಡ ಜಿಲ್ಲೆಯ 7 ಉಪನೋಂದಣಿ ಕಛೇರಿಗಳ ಪೈಕಿ ಸರದಿ ಪ್ರಕಾರ ಜಿಲ್ಲೆಯ ಒಂದು ಉಪನೋಂದಣಿ ಕಛೇರಿಯಲ್ಲಿ ಆಸ್ತಿ, ವಿವಾಹ ನೋಂದಣಿ ಸೇರಿದಂತೆ ನೋಂದಣಿ ಕಾರ್ಯ ನಡೆಯಲಿದೆ.

ಜಿಲ್ಲೆಯ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆದವಟ್ಟಿ ಶ್ರೀಗಳವರ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಬೆದವಟ್ಟಿ ಹಿರೇಮಠ ಶ್ರೀಶೈಲ ಪೀಠ ಪರಂಪರೆಯ ಶಾಖಾ ಮಠವಾಗಿದ್ದು, ಈ ಮಠದ ಪಟ್ಟಾಧಿಕಾರಿಗಳಾದ ಶ್ರೀ ಶಿವಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ತಮ್ಮ 87ನೇ ವಯಸ್ಸಿನಲ್ಲಿ ಮೇ 28ರಂದು ಲಿಂಗೈಕ್ಯರಾದ ವಿಷಯ ತಿಳಿದು ಅತ್ಯಂತ ವಿಷಾದವಾಯಿತು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ. ಸರಳ ಸಾತ್ವಿಕ ಗುಣಗಳನ್ನು ಹೊಂದಿದ ಶ್ರೀಗಳವರು ಪಂಚಪೀಠದ



ಅಭಿಮಾನಿಗಳಾಗಿದ್ದು, ಆ ಭಾಗದಲ್ಲಿ ವೀರಶೈವ ಧರ್ಮ, ಸಂಸ್ಕೃತಿ, ಆದರ್ಶ, ಪರಂಪರೆ ಉಳಿಸಿ ಬೆಳೆಸುವಲ್ಲಿ ಬಹಳಷ್ಟು ಶ್ರಮಿಸಿದ್ದನ್ನು ಮರೆಯಲಾಗದು. ತಮ್ಮ ಜೀವಿತಕಾಲದಲ್ಲಿ ಬೆದವಟ್ಟಿ ಹಿರೇಮಠಕ್ಕೆ ಒಂದು ಹೊಸ ಆಯಾಮವನ್ನು ತಂದುಕೊಟ್ಟ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ. ಆಚಾರ-ವಿಚಾರಗಳನ್ನು ಬದುಕಿನುದ್ದಕ್ಕೂ ಕಾಪಾಡಿಕೊಂಡು ಬಂದ ಹಿರಿಯ ಜೀವ ಅವರ ಅಗಲಿಕೆಯಿಂದ ಬೆದವಟ್ಟಿ ಹಿರೇಮಠದ ಶಿಷ್ಯ ಸದ್ಭಕ್ತರಿಗೆ ಅಪಾರ ದುಃಖವನ್ನು ಉಂಟುಮಾಡಿದೆ.

ಅಗಲಿದ ಅವರ ಪವಿತ್ರ ಆತ್ಮಕ್ಕೆ ಪರಮಾತ್ಮ ಚಿರಶಾಂತಿಯಿತ್ತು ಅವರ ಅಗಲಿಕೆಯಿಂದ ಉಂಟಾದ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಸರ್ವರಿಗೂ ಅನುಗ್ರಹಿಸಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

## ಮಕ್ಕಳು ಬಾಲ್ಯದ ಅವಕಾಶ ಕಳೆದುಕೊಳ್ಳುತ್ತಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ರಾಜೂರಿನ ಶ್ರೀ ಬಸವೇಶ್ವರ ಕಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವು ವಿಜೃಂಭಣೆಯಿಂದ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆ.ಬಿ. ಬೆನಕನವಾರಿ ಮಾತನಾಡಿ, ಮಕ್ಕಳು ಮಾನಸಿಕವಾಗಿ ಸದೃಢವಾಗಲು ಹಾಗೂ ಅವರಲ್ಲಿನ ಬೌದ್ಧಿಕ ಪ್ರಜ್ಞೆ ವಿಕಸಿತಗೊಳ್ಳಲು ಮಕ್ಕಳಿಗೆ ನಮ್ಮ ತಲೆಮಾರು, ಪರಂಪರೆ ಅನುಭವಿಸುವ ವಾತಾವರಣ ಕಲ್ಪಿಸುವುದು ಅನಿವಾರ್ಯ. ಆದರೆ ನಗರೀಕರಣದ ಬೆಳವಣಿಗೆಯಲ್ಲಿ ಮಕ್ಕಳು ತಮಗೆ ಬಾಲ್ಯದಲ್ಲಿ ಸಿಗಬೇಕಾದ ಅನೇಕ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ ನಮ್ಮ ಶ್ರೀ ಬಸವೇಶ್ವರ ಕಿರಿಯ ಪ್ರಾಥಮಿಕ ಶಾಲೆಯು ಬೇಸಿಗೆ ಶಿಬಿರವನ್ನು ಏರ್ಪಡಿಸಿ



ಮಕ್ಕಳಿಗೆ ಅಕ್ಷರ ಜ್ಞಾನದ ಜೊತೆಗೆ ಸಂಸ್ಕೃತಿ, ಪರಂಪರೆಯನ್ನು ಪರಿಚಯ ಮಾಡಿಸುತ್ತಿರುವುದು ಶ್ಲಾಘನೀಯ ಎಂದು ಸಂತಸ ವ್ಯಕ್ತಪಡಿಸಿದರು.

ಮುಖ್ಯ ಅತಿಥಿ ಜಿ.ಜಿ. ವ್ಯಾಪಾರಿ ಮಾತನಾಡಿ, ಮಕ್ಕಳಲ್ಲಿ ಹುದುಗಿರುವ ಪ್ರತಿಭೆ ಹೊರತರಲು ಇಂತಹ ಬೇಸಿಗೆ ಶಿಬಿರಗಳು ಸಹಾಯಕಾರಿಯಾಗಲಿವೆ. ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಲು ವೇದಿಕೆ ಕಲ್ಪಿಸಿ ಕೊಟ್ಟಂತಾಗಿದೆ. ಶಿಬಿರದಲ್ಲಿ ಪಡೆದ ಪಠ್ಯಕ್ರಮದ ತರಬೇತಿ ಮಕ್ಕಳ ಜ್ಞಾನದ ಮೇಲೆ ಸಾಕಷ್ಟು ಸಕಾರಾತ್ಮಕ ಪರಿಣಾಮ ಬೀರಲಿದೆ ಎಂದರು.

ಎಸ್.ಕೆ. ಬೆನಕನವಾರಿ ಮಾತನಾಡಿ, ಮಕ್ಕಳ ಮನಸ್ಸು ವಿಕಾಸಗೊಳ್ಳಲು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಿಗೂ ಪೋಷಕರು ಆದ್ಯತೆ ಕೊಡಬೇಕು. ಇಂದಿನ ದಿನಗಳಲ್ಲಿ ಪೋಷಕರು ತಮ್ಮ ಮಕ್ಕಳು ಹೆಚ್ಚಿನ ಅಂಕ ಗಳಿಸಬೇಕು ಎಂದು ಆಶಿಸುತ್ತಾರೆ. ಆದರೆ ಅವರ ಮಾನಸಿಕ ಬೆಳವಣಿಗೆ ಹಾಗೂ ವ್ಯಕ್ತಿತ್ವ ವಿಕಾಸನದ ಬಗ್ಗೆ ಗಮನವೇ ಹರಿಸುವುದು ಕಡಿಮೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಶಿಬಿರದ ವಿದ್ಯಾರ್ಥಿನಿ ಸಾವಿತ್ರಿ ಬೆನಕನವಾರಿ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡ ಎಲ್ಲಾ ಮಕ್ಕಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

ಸ್ಮಿತಾ ಪಾಟೀಲ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ನಿಂಗಪ್ಪ ಹಕಪ್ಪರದ ಸ್ವಾಗತಿಸಿದರು.

ಪುಟ್ಟರಾಜ ಕಡಬಲಕಟ್ಟಿ ಕಾರ್ಯಕ್ರಮವನ್ನು ನಿರೂಪಿಸಿದರು. ಹರ್ಷಾ ಜೋಗಿನ್ ವಂದಿಸಿದರು.

## ನಟರ ವಿರುದ್ಧ ಕ್ರಮಕ್ಕೆ ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದ ಹಿರಿಯ ಕಲಾವಿದ, ಕರುನಾಡು ಚಕ್ರವರ್ತಿ ಶಿವರಾಜಕುಮಾರ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ಮಡೆನೂರು ಮನು ವಿರುದ್ಧ ಹಾಗೂ ಕನ್ನಡ ಭಾಷೆಯ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ತಮಿಳು ನಟ ಕಮಲ್ ಹಾಸನ್ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಅಖಿಲ ಕರ್ನಾಟಕ ಡಾ. ರಾಜಕುಮಾರ ಅಭಿಮಾನಿ ಸಂಘಗಳ ಒಕ್ಕೂಟ, ಡಾ. ಶಿವರಾಜಕುಮಾರ ಅಭಿಮಾನಿಗಳ ಸಂಘ, ರಾಜರತ್ನ ಪುನೀತ್ ರಾಜಕುಮಾರ ಅಭಿಮಾನಿಗಳ ಸಂಘ ಗದಗ ಜಿಲ್ಲಾ ಘಟಕದ ವತಿಯಿಂದ ಗದಗ ಶಹರ ಪಿಎಸ್‌ಐರವರಿಗೆ ಮನವಿ ಸಲ್ಲಿಸಲಾಯಿತು.

ಸಂಘದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಸಂಗಾಪೂರ ಮಾತನಾಡಿ, ಇತ್ತೀಚೆಗಷ್ಟೇ ಅತ್ಯಾಚಾರ ಪ್ರಕರಣದಲ್ಲಿ ಬಂಧಿತನಾಗಿರುವ ನಟ ಮಡೆನೂರು ಮನು ಅವರು ದೂರವಾಣಿಯಲ್ಲಿ ನಟಿಯೊಬ್ಬರೊಂದಿಗೆ ಕನ್ನಡದ ಖ್ಯಾತ ನಟ ಶಿವರಾಜಕುಮಾರ ಮತ್ತು ಧ್ರುವ ಸರ್ಜಾ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವುದು ಸಮಸ್ತ ಕನ್ನಡ ನಾಡಿನ ಜನರ ಮನಸ್ಸುಗಳಿಗೆ ನೋವನ್ನುಂಟುಮಾಡಿದೆ.

ಅಲ್ಲದೇ ತಮಿಳು ಹಿರಿಯ ನಟ ಕಮಲ್ ಹಾಸನ್ ಕನ್ನಡ ಭಾಷೆಯು ತಮಿಳು ಭಾಷೆಯಿಂದ ಹುಟ್ಟಿರುವುದು ಎಂದು ವಿವಾದಾತ್ಮಕ ಹೇಳಿಕೆ ನೀಡಿ ಕನ್ನಡಿಗರನ್ನು ಕೆರಳಿಸಿದ್ದಾರೆ. ಇವರಿಬ್ಬರ ವಿರುದ್ಧವೂ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾಧ್ಯಕ್ಷ ವಿಠ್ಠಲ ಪರಾಪೂರ, ಉಪಾಧ್ಯಕ್ಷ ನಾಗರಾಜ ಗುತ್ತಿ, ಖಜಾಂಚಿ ವಿನಾಯಕ ಗಜಕೋಶ, ಮಲ್ಲೇಶ ಪರಾಪೂರ, ನಾಗರಾಜ ಸಂಗಾಪೂರ, ಜೀವನ ಪರಾಪೂರ, ಮಹಿಳಾ ಘಟಕದ ಅಧ್ಯಕ್ಷರಾದ ರೇಖಾ ಬಂಗಾರಶೆಟ್ಟರ, ಮೇಘನಾ ಕೊಟ್ಟೂರು ಉಪಸ್ಥಿತರಿದ್ದರು.




ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆರಂಭಗೊಂಡಿರುವ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ನಗರದ ಅಂಜುಮನ್ ಕಮಿಟಿ ಅಧ್ಯಕ್ಷರು ಹಾಗೂ ಸದಸ್ಯರು ಬೆಂಬಲ ಸೂಚಿಸಿ ಅವರ ಅಹವಾಲು ಸ್ವೀಕರಿಸಿದರು. ಅಧ್ಯಕ್ಷರಾದ ತಾಜುದ್ದೀನ ಕಿಂಡ್ರಿ ಮಾತನಾಡಿ, ಪೌರ ನೌಕರರ ಬೇಡಿಕೆಗಳು ನ್ಯಾಯಯುತವಾಗಿದ್ದು, ನಿಮ್ಮ ಮನವಿಯನ್ನು ಸಚಿವರ ಗಮನಕ್ಕೆ ತರುತ್ತೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎ.ಡಿ. ಮುಜಾವರ, ಹೈದರ ಖವಾಸ, ಮುನ್ನಾ ಢಾಲಾಯತ, ದಾವೂದ ಜಮಾಲ್, ದಾವಲಸಾಬ ಲಕ್ಷ್ಮೇಶ್ವರ ಹಾಜರಿದ್ದರು.

## ಬಸ್ ನಿಲ್ದಾಣದ ಅವ್ಯವಸ್ಥೆ ಪರಿಶೀಲಿಸಿದ ಡಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬಸ್ ನಿಲ್ದಾಣದ ಅವ್ಯವಸ್ಥೆಯನ್ನು ಕಣ್ಣಾರೆ ಕಂಡು ಕೆಎಸ್‌ಆರ್‌ಟಿಸಿ ಡಿಸಿ ದೇವರಾಜು ಬೇಸರ ವ್ಯಕ್ತಪಡಿಸಿದರು. ಎಲ್ಲಿ ಬೇಕೆಂದರಲ್ಲಿ ಬಿದ್ದ ಕಸ, ಕಂಬಗಳಿಗೆಲ್ಲ ಎಲೆಯಡಿಕೆ ಉಗುಳಿದ ಕಲೆಗಳು, ಬೇಕಾಬಿಟ್ಟಿಯಾಗಿ ನಿಲ್ಲುವ ಬಸ್‌ಗಳು, ಬಸ್ ಹಿಡಿಯಲು ಮಕ್ಕಳನ್ನು ಎತ್ತಿಕೊಂಡು ಓಡುವ ತಾಯಂದಿರು, ಪ್ಲಾಟ್‌ಫಾರ್ಮ್‌ನಲ್ಲಿದ್ದ ಕಸದ ಡಬ್ಬಿ, ಕುಡಿಯುವ ನೀರಿನ ಕೊರತೆ, ಖಾಸಗಿ ವಾಹನಗಳ



ನಿಲುಗಡೆ, ಮುರಿದು ಬಿದ್ದ ಛಾವಣಿ ಇತ್ಯಾದಿಗಳನ್ನು ಕಂಡು ಡಿಸಿ ರೋಸಿಹೋದರು.

ಹೊರಗಿನಿಂದ ಬರುವ ಬಸ್‌ಗಳನ್ನು ಸರಿಯಾಗಿ ಪ್ಲಾಟ್‌ಫಾರ್ಮ್ ಮೇಲೆ ನಿಲ್ಲಿಸಲು ಸಾರಿಗೆ ನಿಯಂತ್ರಕರಿಗೆ ಹೇಳಿದರು. ಸ್ವತಃ ತಾವೇ ನಿಂತು ಐದಾರು ಬಸ್‌ಗಳು ಹಾಗೆಯೇ ನಿಲ್ಲುವಂತೆ ಮಾಡಿದರು. ಕಸದ ಡಬ್ಬಿಯನ್ನು ತೆಗೆಯಿಸಿದರು, ಕುಳಿತವರಿಗೆ ಇಲ್ಲಿ ಉಗುಳಿ ನಿಮ್ಮದೇ ಬಸ್ ನಿಲ್ದಾಣವನ್ನು ಹೊಲಸು ಮಾಡಬೇಡಿರೆಂದು ವಿನಂತಿಸಿದರು.

ದೂರವಾಣಿ ಮೂಲಕ ರೋಣ ಘಟಕಾಧಿಕಾರಿಯನ್ನು ಸಂಪರ್ಕಿಸಿದ ಡಿಸಿ, ಕನಿಷ್ಠ ವಾರಕ್ಕೊಮ್ಮೆಯಾದರೂ ನೀವು ಬಂದು ಇಲ್ಲಿನ ವ್ಯವಸ್ಥೆಯನ್ನು ನೋಡಿಕೊಳ್ಳಬೇಕೆಂದು ತರಾಟೆಗೆ ತೆಗೆದುಕೊಂಡರು. ಇಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಸ್ಥಾನಿಕ ವರದಿಯನ್ನು ನೀಡಬೇಕೆಂದರು. ನರೇಗಲ್ಲ ಬಸ್ ನಿಲ್ದಾಣದ ಅವ್ಯವಸ್ಥೆಯನ್ನು ಕಣ್ಣಾರೆ ಕಾಣುತ್ತಿದ್ದೇನೆ. ಇನ್ನು 3-4 ದಿನದೊಳಗೆ ಎಲ್ಲವೂ ಸರಿಯಾಗಬೇಕೆಂದು ರೋಣ ಘಟಕಾಧಿಕಾರಿಗೆ ತಾಕೀತು ಮಾಡಿದರು.

ದೊಡ್ಡ ನಿಲ್ದಾಣದಲ್ಲಿ ಒಬ್ಬನೇ ಒಬ್ಬ ಸಾರಿಗೆ ನಿಯಂತ್ರಕ ಇರುವುದನ್ನು ಕಂಡು ಕೋಪಗೊಂಡರು. ಇನ್ನೊಬ್ಬ ಸಾರಿಗೆ ನಿಯಂತ್ರಣಾಧಿಕಾರಿಯನ್ನು ನೀಡಲು ಘಟಕಾಧಿಕಾರಿಗೆ ಹೇಳಿದರು. ಸ್ಥಳದಲ್ಲಿದ್ದ ಸಾರಿಗೆ ನಿಯಂತ್ರಕನಿಗೆ ಎಚ್ಚರಿಕೆ ನೀಡಿ ಸುತ್ತಲೂ ಇರುವ ಹೊಲಸನ್ನು ಸ್ವಚ್ಛಗೊಳಿಸುವ ವ್ಯವಸ್ಥೆ ಮಾಡಲು ತಿಳಿಸಿದರು.

# ದುರಹಂಕಾರಿ ಕಮಲ್ ಹಾಸನ್ ಕನ್ನಡಿಗರ ಕ್ಷಮೆ ಕೇಳಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಚೆನ್ನೈನಲ್ಲಿ ನಡೆದ ಧ್ವನಿಸುರಳಿ ಬಿಡುಗಡೆ ಕಾರ್ಯಕ್ರಮದಲ್ಲಿ ಕನ್ನಡ ಭಾಷೆ ತಮಿಳಿನಿಂದ ಹುಟ್ಟಿದ್ದು ಎನ್ನುವ ಮೂಲಕ ದುರಹಂಕಾರದಿಂದ ಮಾತನಾಡಿರುವ ತಮಿಳು ನಟ ಕಮಲ್ ಹಾಸನ್ ಈ ಕೂಡಲೇ ಕನ್ನಡಿಗರ ಕ್ಷಮಾಪಣೆ ಕೇಳಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಎಸ್.ಮಾಲಿಪಾಟೀಲ ಒತ್ತಾಯಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಭಾರತವು ಸೇರಿದಂತೆ ವಿಶ್ವದ ಹತ್ತು ಹಲವು ಕಡೆಗಳಲ್ಲಿ ಕನ್ನಡದ ಹೆಗ್ಗುರುತುಗಳು ಶತ ಶತಮಾನಗಳಿಂದಲೂ ಇದೆ. ಜಗತ್ತಿನ ಹಲವು ಭಾಷೆಗಳಲ್ಲಿ ಕನ್ನಡಕ್ಕೆ ಶ್ರೇಷ್ಠ ಮಾನ್ಯತೆ ಇದೆ ಎಂದು ಕನಿಷ್ಠ ತಿಳುವಳಿಕೆ ಇಲ್ಲದೆ ತಮಿಳು ನಟ ಕಮಲಹಾಸನ್ ಅವಹೇಳನಕಾರಿ ಮಾತುಗಳನ್ನಾಡಿದ್ದಾರೆ. ಅವರ ಹೇಳಿಕೆಯನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ್ರು, ಕಮಲ್ ಹಾಸನ್ ಅವರ ಚಿತ್ರವನ್ನು ಕರ್ನಾಟಕದಲ್ಲಿ ಬಿಡುಗಡೆಗೊಳಿಸಬಾರದು ಎಂದು ಚಲನಚಿತ್ರ ವಾಣಿಜ್ಯ ಮಂಡಳಿಗೆ ಎಚ್ಚರಿಕೆಯನ್ನು ನೀಡಿದ್ದಾರೆ ಎಂದು ಅವರು ಹೇಳಿದ್ದಾರೆ.

## ಗಿಗ್ ಕಾರ್ಮಿಕರ ಕಾಯ್ದೆಗೆ ಸುಗ್ರೀವಾಜ್ಞೆ । ಐತಿಹಾಸಿಕ ಹೆಜ್ಜೆ ಎಂದ ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಫ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸುವ ಗುರಿಯನ್ನು ಹೊಂದಿರುವ ಕಾನೂನಿಗೆ ಸುಗ್ರೀವಾಜ್ಞೆಯನ್ನು ಹೊರಡಿಸಿರುವ ಕರ್ನಾಟಕ ಸರ್ಕಾರದ ಕ್ರಮವನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಗುರುವಾರ ಶ್ಲಾಘಿಸಿದ್ದಾರೆ. ದೇಶದ ಪ್ರತಿ ರಾಜ್ಯಕ್ಕೂ ಪಕ್ಷದ ದೃಷ್ಟಿಕೋನ ಇದಾಗಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

### ವಿಭಾಗ ಮಟ್ಟದ ಸ್ಲಂ ಜನರ ಸಮಾವೇಶ, ಸಾಂಸ್ಕೃತಿಕ ಹಬ್ಬ ಕಾರ್ಯಕ್ರಮದಲ್ಲಿ ಎಸ್.ವ್ಹಿ. ಸಂಕನೂರು

# ಸ್ಲಂ ಜನರಿಗೂ ಸಮಾನ ಅವಕಾಶ ಸಿಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಸ್ಲಂ ಜನರ ಮೂಲಭೂತ ಹಕ್ಕುಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮೊದಲು ಆದ್ಯತೆ ನೀಡಬೇಕು. ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರು ಕೂಡಾ ಮನುಷ್ಯರೇ. ಸರ್ಕಾರಗಳು ನಾಗರಿಕ ಸಮಾಜದಲ್ಲಿ ಸ್ಲಂ ನಿವಾಸಿಗಳಿಗೆ ಸಂವಿಧಾನಬದ್ಧ ಹಕ್ಕುಗಳನ್ನು ನೀಡುವ ಮೂಲಕ ಸಮಾನವಾದ ಅವಕಾಶಗಳನ್ನು ದೊರಕಿಸಿಕೊಡುವ ವಾತಾವರಣ ನಿರ್ಮಾಣ ಮಾಡಬೇಕು.

ಈ ಬಗ್ಗೆ ಸ್ಲಂ ಜನರ ಪರವಾಗಿ ಮುಂಬರುವ ವಿಧಾನ ಪರೀಷತ್ ಅಧಿವೇಶನದಲ್ಲಿ ಹೋರಾಟ ನಡೆಸುತ್ತೇನೆ ಎಂದು ವಿ.ಪ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರು ಹೇಳಿದರು. ಅವರು ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸ್ಲಂ ಜನಾಂದೋಲನ ಕರ್ನಾಟಕ ಮತ್ತು ಸಾವಿತ್ರಿಬಾ ಪುಲೆ ಮಹಿಳಾ ಸಮಿತಿ ಸಹಕಾರದಲ್ಲಿ, ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ವಿಭಾಗ ಮಟ್ಟದ ಸ್ಲಂ ಜನರ ಸಮಾವೇಶ ಹಾಗೂ ಸಾಂಸ್ಕೃತಿಕ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಕಲಾವಿದರನ್ನು ನಮ್ಮ ವೇದಿಕೆಯ ಮುಖಾಂತರ ಹೊರ ಜಗತ್ತಿಗೆ ಪರಿಚಯಸುವ ಕೆಲಸ ಈ ಸ್ಲಂ ಹಬ್ಬದ ಮೂಲಕ ಮಾಡಲಾಗುತ್ತಿದೆ. ಸ್ಲಂ ಜನಾಂದೋಲನ ಕರ್ನಾಟಕ ಸಂಘಟನೆಯ ಸಹಕಾರದಲ್ಲಿ ವಿಭಾಗ ಮಟ್ಟದಲ್ಲಿ ಬರುವ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕೊಳಗೇರಿಗಳ ಸಾಮಾಜಿಕ ನ್ಯಾಯ ಮತ್ತು ಸಮಾನ ಹಕ್ಕುಗಳಿಗೆ ನಿರಂತರ ಹೋರಾಟಗಳನ್ನು ನಡೆಸುವ ಮುಖಾಂತರ ಕೊಳಗೇರಿ ಪ್ರದೇಶದ ಜನರು ಘನತೆಯಿಂದ ಬದುಕು ನಡೆಸಲು ವಾತಾವರಣ ನಿರ್ಮಾನ ಮಾಡಲಾಗುತ್ತಿದೆ ಎಂದು ಹೇಳಿದರು. ಸಮಾವೇಶದಲ್ಲಿ ವಿವಿಧ ಕಲಾ ತಂಡಗಳಾದ ಯಲ್ಲಪ್ಪ ಡೊಕ್ಕನವರ ಅವರಿಂದ ಸುಡಗಾಡ ಸಿದ್ದರ ವೇಷ, ದುರ್ಗಮುರ್ಗಿ ಕಲಾ ತಂಡ, ಮಂಗಳಮುಖಿಯರ ತಂಡ, ಗೋಸಾವಿ ತಂಡ, ಹುಬ್ಬಳ್ಳಿಯ ದರವೇಶ ತಂಡ ಹಾಗೂ ಹೊಸಪೇಟೆಯ ತಮಟೆ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಹಿರಿಯ ಪತ್ರಕರ್ತ ಶಿವಕುಮಾರ ಕುಷ್ಟಗಿ, ದಲಿತ ಸಂಘರ್ಷ ಸಮಿತಿ ಸಂಚಾಲಕ ವೆಂಕಟೇಶಯ್ಯ, ಪ್ರಗತಿಪರ ಚಿಂತಕರಾದ ಪ್ರೊ. ಸತೀಶ ಪಾಸಿ, ಬಸವರಾಜ ಪೂಜಾರ, ಪ್ರಮುಖರಾದ ಶೋಭಾ ಕಮತರ, ವೆಂಕಮ್ಮ, ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಂಚಾಲಕಿ ಪರವೀನಬಾನು ಹವಾಲ್ದಾರ, ಉಮರಫಾರುಖ ಹುಬ್ಬಳ್ಳಿ, ಅನ್ವರ ಶಿರಹಟ್ಟಿ, ಎಂ.ಪಿ. ಮುಳಗುಂದ ವೇದಿಕೆ ಮೇಲೆ ಉಪಸ್ಥಿತರಿದ್ದರು. ಎಂ.ಬಿ. ನದಾಫ್ ವಕೀಲರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಪುಷ್ಪಾ ಬಿಜಾಪೂರ, ಮೆಹಬೂಬಸಾಬ ಬಳ್ಳಾರಿ, ಮುನ್ನಾ ಅಗಡಿ, ಖಾಜಾಸಾಬ ಇಸ್ಮಾಯಿಲನವರ, ಸಲೀಂ ಹರಿಹರ, ಆಶಾ ಜೂಲಗಡ, ಲಕ್ಷ್ಮಣ ರಾಮನಗರ, ಮೆಹರುನಿಸಾ ಡಂಬಳ, ಮಕ್ತುಮಸಾಬ ಮುಲ್ಲಾನವರ, ಮಹ್ಮದಸಾಬ ಗಡಾದ, ಮಂಜುನಾಥ ಶ್ರೀಗಿರಿ, ಸಾಕ್ರುಬಾಯಿ ಗೋಸಾವಿ ಹಾಗೂ ನೂರಾರು ಸ್ಲಂ ನಿವಾಸಿಗಳು ಸಮಾವೇಶದಲ್ಲಿ ಭಾಗವಹಿಸಿದ್ದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಲಂ ಜನಾಂದೋಲನ ಕರ್ನಾಟಕ ಸಂಘಟನೆ ರಾಜ್ಯ ಸಂಚಾಲಕ ಎ.ನರಸಿಹಮೂರ್ತಿ ಮಾತನಾಡಿ, ರಾಜ್ಯ ಸಮಿತಿಯಿಂದ ಸ್ಲಂ ಜನರ ಭೂಮಿ ಹಕ್ಕಿಗಾಗಿ ನಿರಂತರ ಹೋರಾಟಗಳನ್ನು ನಡೆಸುತ್ತ ಬಂದಿದ್ದೇವೆ. ನಮ್ಮ ರಾಜ್ಯ ಸಮಿತಿಯ ನಿರಂತರ ಹೋರಾಟದ ಫಲವಾಗಿ ರಾಜ್ಯದ ಲಕ್ಷಾಂತರ ಕೊಳಗೇರಿ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗುತ್ತಿದೆ. ಕಾಂಗ್ರೆಸ್ ಸರ್ಕಾರ ರಾಜ್ಯದ ಜನರಿಗೆ ಭೂಮಿ ಹಕ್ಕು ಎಂಬ 6ನೇ ಗ್ಯಾರಂಟಿಯನ್ನು ಘೋಷಣೆ ಮಾಡಿದೆ. ಈ ಗ್ಯಾರಂಟಿಯ ಮೂಲಕ ನಮ್ಮ ರಾಜ್ಯದ ಸ್ಲಂ ನಿವಾಸಿಗಳಿಗೆ ಭೂಮಿ ಹಕ್ಕನ್ನು ಖಾತ್ರಿಗೊಳಿಸಬೇಕೆಂದು ಒತ್ತಾಯಿಸಿದರು.

### ಅಂತಾರಾಷ್ಟ್ರೀಯ ಸಹಕಾರ ವರ್ಷಾಚರಣೆ-2025ರ ಅಂಗವಾಗಿ 'ಸಹಕಾರದಿಂದ ಸ್ವಚ್ಛತಾ ಅಭಿಯಾನ'

# ಸಮಾಜದ ಸ್ವಚ್ಛತೆ ನಮ್ಮೆಲ್ಲರ ಜವಾಬ್ದಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್, ಸಹಕಾರ ಇಲಾಖೆ ಗದಗ, ಕೆ.ಸಿ.ಸಿ. ಬ್ಯಾಂಕ್ ಧಾರವಾಡ, ಕೆ.ಎಂ.ಎಫ್ ಧಾರವಾಡ ಹಾಗೂ ಗದಗ ಜಿಲ್ಲೆಯ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಸಹಕಾರ ವರ್ಷಾಚರಣೆ-2025ರ ಅಂಗವಾಗಿ 'ಸಹಕಾರದಿಂದ ಸ್ವಚ್ಛತಾ ಅಭಿಯಾನ' ಕಾರ್ಯಕ್ರಮ ಕೆ.ಸಿ.ಸಿ. ಬ್ಯಾಂಕ್ ಹಿಂಭಾಗದ ಆವರಣದಲ್ಲಿ ಜರುಗಿತು.

ಕೆ.ಸಿ.ಸಿ. ಬ್ಯಾಂಕ್ ನಿರ್ದೇಶಕ ಎಂ.ಎಫ್. ಕಲಗುಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಹಕಾರದಿಂದ ಸ್ವಚ್ಛತೆ ಅಭಿಯಾನ ಕಾರ್ಯಕ್ರಮವನ್ನು ಇಂದು ಆಯೋಜಿಸಿದ್ದು, ತಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿರುವುದು ಸಂತಸ ತಂದಿದೆ. ಜಿಲ್ಲೆಯಲ್ಲಿರುವ ಎಲ್ಲಾ ಸಹಕಾರ ಸಂಘಗಳು ತಮ್ಮ ಸಂಸ್ಥೆಗಳು ಹಾಗೂ ಸರ್ಕಾರಿ ರಸ್ತೆ, ಆಟದ ಮೈದಾನ, ಉದ್ಯಾನವನ ಹಾಗೂ ಗ್ರಾಮ ಪಂಚಾಯತದಂತಹ ವಿವಿಧ ಸ್ಥಳಗಳಲ್ಲಿ ವರ್ಷಾದ್ಯಂತ ಸ್ವಚ್ಛತಾ ಕಾರ್ಯ ಕೈಗೊಳ್ಳಲು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ, ಮರ್ಚಂಟ್ಸ್ ಅರ್ಬನ್ ಬ್ಯಾಂಕ್ ಅಧ್ಯಕ್ಷ ಕೆ.ಎಸ್. ಚಟ್ಟಿ, ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ರೋಣ, ಶಿರಹಟ್ಟಿ, ಮತ್ತು ನರಗುಂದ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ, ಕೆ.ಸಿ. ಕೂಸನೂರಮಠ, ಪ್ರಕಾಶ ನವಲಗುಂದ, ಕೆ.ಸಿ.ಸಿ. ಬ್ಯಾಂಕ್ ಗದಗ ಮ್ಯಾನೇಜರ್ ಆರ್.ಎಸ್. ಕಟ್ಟಿ, ಪ್ರಭಾರ ಜಿಲ್ಲಾ ನಿಯಂತ್ರಣಾಧಿಕಾರಿ ಎಸ್.ವ್ಹಿ. ಚಳಗೇರಿ, ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥ ಡಾ. ಪ್ರಸನ್ನ ಪಟ್ಟೇದ ಮುಂತಾದವರು ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಮುಖ್ಯಸ್ಥರಾದ ಬಸವರಾಜ ಮಲ್ಲಾಪೂರ ವಿಶೇಷ ಉಪನ್ಯಾಸಕರಾಗಿ ಆಗಮಿಸಿ ಸ್ವಚ್ಛತೆ, ನೈರ್ಮಲ್ಯ, ಮಾಲಿನ್ಯ, ಪರಿಸರ ಕಾಪಾಡುವಲ್ಲಿ ಪ್ರಜೆಗಳ ಪಾತ್ರ, ಸಾಮಾಜಿಕ ಜವಾಬ್ದಾರಿ, ಆರೋಗ್ಯದ ಕುರಿತು ಮಾಹಿತಿಯನ್ನು ನೀಡಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ರಶೀದಾಬಾನು ಸಿ.ಯಲಿಗಾರ ವಂದಿಸಿದರು.




ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡುತ್ತಾ, ನಮ್ಮ ಮನೆಯನ್ನು ಹೇಗೆ ನಾವು ಸ್ವಚ್ಛವಾಗಿ ಇಟ್ಟುಕೊಳ್ಳುತ್ತೇವೆಯೋ ಹಾಗೇ ನಮ್ಮ ಸಮಾಜ ಹಾಗೂ ಗ್ರಾಮವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

# ಎಸ್.ಪಿ ಬಿ.ಎಸ್. ನೇಮಗೌಡರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಡಿಜಿ ಮತ್ತು ಐಜಿಪಿ ಪ್ರಶಂಸನಾ ಪದಕ ಪ್ರಶಸ್ತಿಗೆ ಭಾಜನರಾದ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡರನ್ನು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಗದಗ ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಸನ್ಮಾನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫೀ ಎಸ್. ನಾಗರಕಟ್ಟಿ, ಡಿಜಿ ಮತ್ತು ಐಜಿಪಿ ಪ್ರಶಂಸನಾ ಪದಕ ಪ್ರಶಸ್ತಿಗೆ ಭಾಜನರಾದ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಪಿ ಬಿ.ಎಸ್. ನೇಮಗೌಡ, ಗದಗ ಜಿಲ್ಲೆಯ ಪೊಲೀಸ್ ಇಲಾಖೆಯ ಎಲ್ಲ ವರ್ಗದ ಅಧಿಕಾರಿಗಳು ಮತ್ತು ಸಿಬ್ಬಂದಿಗಳ, ಗದಗ ಜನತೆಯ ಸಹಕಾರದಿಂದ ನನಗೆ ಈ ಪ್ರಶಸ್ತಿ ದೊರಕಿರುವುದು ಸಂತಸವನ್ನು ನೀಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಧಾರವಾಡ ಜಿಲ್ಲಾ ಮತ್ತು ಗದಗ ಜಿಲ್ಲಾ ಉಸ್ತುವಾರಿ ಅಧ್ಯಕ್ಷರಾದ ಎಂ.ಡಿ. ಜಾಫರ ಢಾಲಾಯತ, ಲಾಡಸಾಬ್ ಕಿತ್ತೂರು, ಎಂ.ಎಂ. ಶಿರಹಟ್ಟಿ, ಸಲೀಂ ನರಗುಂದ, ಮುಜಮಿಲ್ ಬಳ್ಳಾರಿ, ಇಲಿಯಾಸ ಶಿರಹಟ್ಟಿ, ಎಸ್.ಎಸ್. ಖಾದ್ರಿ, ಮಹಮ್ಮದ ಹನೀಫ್ ಇರಕಲ್ಲ, ಅಲ್ಲಾಭಕ್ಷ ದೊಡ್ಡಮನಿ, ಇಸಾಕ ಇರಕಲ್ಲ, ಯೂನಸ ಖಾಜಿ, ನಾಸೀರ ನರೇಗಲ್ಲ, ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಯಾಸೀನ್ ಮುಲ್ಲಾ, ಯೂನೂಸ ಮುಲ್ಲಾ, ಅಫ್ಜಲ್ ಮನಿಯಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಧಿಕಾರಿಗಳ ಸಭಾ ಭವನದಲ್ಲಿ ಮಂಗಳವಾರ ಡೆಂಗೀ ದೈನಂದಿನ ನಿಗಾವಣೆಗಾಗಿ 'ಅಂತರ್ ಇಲಾಖಾ ಸಮನ್ವಯ ಸಮಿತಿಯ ಸಭೆ'ಯು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಡೆಂಗೀ ರೋಗವನ್ನು ನಿಯಂತ್ರಿಸಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯೊಂದಿಗೆ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ವಾಡಿಕೆಯಂತೆ ಮಳೆಗಾಲ ಪ್ರಾರಂಭವಾಗಿದ್ದು, ಸೊಳ್ಳೆಗಳು ಹೆಚ್ಚಿನ ಪ್ರಮಾಣದಲ್ಲಿ ಉತ್ಪತ್ತಿಗೊಳ್ಳುತ್ತವೆ. ಡೆಂಗೀ ನಿವಾರಣೆ ನಿಟ್ಟಿನಲ್ಲಿ ಸಮುದಾಯದ ಪಾತ್ರವು ಮಹತ್ವದಾಗಿದ್ದಾಗಿದೆ ಎಂದು ತಿಳಿಸಿದರು.

ಜಿಲ್ಲಾ ನೋಡಲ್ ಅಧಿಕಾರಿಗಳಾದ ಡಾ. ಶಿವಕುಮಾರ ಕೆ.ಮಾನಕರ್ ಮಾತನಾಡಿ, ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಲಾರ್ವಾ ಸಮೀಕ್ಷೆ ಕೈಗೊಳ್ಳಲು ಬಂದಾಗ ಸಾರ್ವಜನಿಕರು ಸಹಕರಿಸಬೇಕೆಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸ್ವಾಗತಿಸಿ ಮಾತನಾಡಿ, ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ ಕೈಗೊಳ್ಳಲು ಗುಣಮಟ್ಟದ ಲಾರ್ವಾ ಸಮೀಕ್ಷೆ ಹಾಗೂ ಜ್ವರ ಸಮೀಕ್ಷೆ ಮಾಡಿ ಖಚಿತ ಪ್ರಕರಣಗಳು ಕಂಡುಬಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ, ಸೂಕ್ತ ಆರೈಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಅಧಿಕಾರಿಗಳು, ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು, ಸಹಾಯಕ ಕೀಟಶಾಸ್ತ್ರಜ್ಞರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ರೂಪಸೇನ ಚವ್ಹಾಣ ವಂದಿಸಿದರು.



### ಮಣ್ಣಿನಲ್ಲಿ ಅತಿಯಾದ ತೇವಾಂಶವಿದ್ದಲ್ಲಿ ಬಿತ್ತನೆ ಮುಂದೂಡಿ

# ರೈತ ಬಾಂಧವರಿಗೆ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಬಹುತೇಕ ಕಡೆ ಧಾರಾಕಾರ ಮಳೆಯಾಗಿದ್ದು, ಭಾಗಶಃ ಮೋಡ ಕವಿದ ವಾತಾವರಣವಿರಲಿದೆ. ರೈತರು ಬಿತ್ತನೆಗೆ ಅವಸರ ಮಾಡದೇ, ಬಿತ್ತಿದ ಮತ್ತು ಇನ್ನೂ ಬಿತ್ತಬೇಕಾದ ಹೊಲಗಳಲ್ಲಿ ನಿಂತಿರುವ ನೀರನ್ನು ಹೊರ ಹಾಕಬೇಕು. ಮಣ್ಣಿನಲ್ಲಿ ಅತಿಯಾದ ತೇವಾಂಶವಿದ್ದಲ್ಲಿ ಬಿತ್ತುವುದನ್ನು ಮುಂದೂಡಬೇಕು.

ಹೆಸರು ಬಿತ್ತನೆಗೆ ಇನ್ನೂ ಒಂದು ವಾರ ಸಮಯವಿದೆ. ಗೋವಿನ ಜೋಳ, ಉದ್ದು, ಹತ್ತಿ, ಈರುಳ್ಳಿ, ಶೇಂಗಾ, ತೊಗರಿ ಇತ್ಯಾದಿ ಬಿತ್ತನೆ ಮಾಡಲು ಸಾಕಷ್ಟು ಸಮಯವಿದೆ. ಈಗಾಗಲೇ ಬಿತ್ತಿದ ಬೆಳೆಗಳು ಚಿಕ್ಕದಾಗಿರುವದರಿಂದ, ಭತ್ತವನ್ನು ಹೊರತುಪಡಿಸಿ ಉಳಿದ ಬೆಳೆಗಳ ಜಮೀನಿನಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಿ. ಸತತವಾಗಿ ಮಳೆ ಬಿದ್ದಿರುವದರಿಂದ ಬೆಳೆಗೆ ಅವಶ್ಯವಿರುವ ಪ್ರಮುಖ ಪೋಷಕಾಂಶಗಳಾದ ಸಾರಜನಕ, ರಂಜಕ ಮತ್ತು ಗಂಧಕಗಳು ನೀರಿನ ಜೊತೆ ಬಸಿದು ಹೋಗಿ ಪೋಷಕಾಂಶಗಳ ಕೊರತೆ ಉಂಟಾಗಬಹುದು. ಮೋಡ ಕವಿದ ವಾತಾವರಣ ಇರುವುದರಿಂದ ಬೆಳೆ ಬೆಳವಣಿಗೆಗೆ ಬೇಕಾದ ಬೆಳಕು ಮತ್ತು ಶಾಖದ ಕೊರತೆ ಉಂಟಾಗಿ ದ್ಯುತಿಸಂಶ್ಲೇಷಣಾ ಕ್ರಿಯೆಯಲ್ಲಿ ಬಾಧೆ ಉಂಟಾಗುತ್ತದೆ. ಇದರಿಂದ ಆರಂಭಿಕ ಹಂತದಲ್ಲಿರುವ ಬೆಳೆಗಳು ಹಳದಿ ಬಣ್ಣ-ಕ್ಕೆ ತಿರುಗಬಹುದು. ಚಿಕ್ಕದಾಗಿ ಇರುವ ಬೆಳೆಗಳಲ್ಲಿ ಪೋಷಕಾಂಶದ ಕೊರತೆ ಲಕ್ಷಣಗಳು ಕಂಡುಬಂದಲ್ಲಿ ತಾತ್ಕಾಲಿಕವಾಗಿ ಪೋಷಕಾಂಶಗಳನ್ನು ನೀಡಿ ಬೆಳೆ ಸಂರಕ್ಷಿಸಬೇಕು.

ಜಿಲ್ಲೆಯಲ್ಲಿ ಆರಂಭಿಕ ಹಂತದಲ್ಲಿರುವ ಹೆಸರು ಬೆಳೆಗೆ ಪೋಷಕಾಂಶದ ಕೊರತೆಯಾಗಿ ಎಲೆಗಳು ಹಳದಿ ಬಣ್ಣಕ್ಕೆ ತಿರುಗಿದ್ದಲ್ಲಿ ಅತಿ ಕಡಿಮೆ ಪ್ರಮಾಣದಲ್ಲಿ ನ್ಯಾನೊ ಯೂರಿಯಾ ಅಥವಾ ಶೇ.100 ನೀರಿನಲ್ಲಿ ಕರಗುವ 19:19:19(5.0ಗ್ರಾಂ./ಲೀ.)+ ಲೈಬ್ರೆಲ್ ಟಿಎಂಎಕ್ಸ್ (1-1.25 ಗ್ರಾಂ./ಲೀ.)ನ್ನು ಸಿಂಪರಣೆ ಮಾಡಲು ತಿಳಿಸಿದೆ. ತುಂತುರು ಮಳೆ ಇದ್ದಾಗ ಸಿಂಪಡಿಸಬೇಕಾದಲ್ಲಿ ಅಂಟುದ್ರಾವಣವನ್ನು 5ಮಿ.ಲೀ. / ಲೀಗೆ ಬೆರೆಸಿ ಸಿಂಪಡಿಸಬೇಕು. ಹೆಸರು ಬೀಜಗಳನ್ನು 10 ಗ್ರಾಂ. ಟ್ರೈಕೊಡರ್ಮಾ ಜೈವಿಕ ಶಿಲೀಂಧ್ರನಾಶಕ ಪ್ರತಿ ಕೆ.ಜಿ ಬೀಜಕ್ಕೆ ಬೀಜೋಪಚಾರ ಮಾಡಿ ಬಿತ್ತುವುದರಿಂದ ಸರ್ಕೊಸ್ಪೊರಾ ಎಲೆಚುಕ್ಕೆ ರೋಗವನ್ನು ನಿಯಂತ್ರಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಸ್ಥಳಗಳಲ್ಲಿ ಮಣ್ಣಿನ ತೇವಾಂಶ ಸಾಕಷ್ಟು ಇರುವದರಿಂದ ಬಿತ್ತನೆ ಮಾಡುವಾಗ ಶಿಫಾರಸ್ಸು ಮಾಡಲಾದ ಒಟ್ಟು ಸಾರಜನಕದ ಶೇ.50 ಮತ್ತು ಸಂಪೂರ್ಣ ಪ್ರಮಾಣದ ರಂಜಕ ಮತ್ತು ಪೊಟ್ಯಾಶ್ ರಸಗೊಬ್ಬರ ಉಪಯೋಗಿಸಲು ಸಲಹೆ ನೀಡಲಾಗಿದೆ. ಹೊಲಗಳಲ್ಲಿ ಸಾವಯವ ಇಂಗಾಲದ ಪ್ರಮಾಣ ಹೆಚ್ಚಿಸಲು ಸಾವಯವ ಗೊಬ್ಬರಗಳು, ಹಸಿರೆಲೆ ಗೊಬ್ಬರಗಳ ಬಳಕೆ ಹೆಚ್ಚಿಸಬೇಕು.

## ಉಡುಪಿ, ಮಂಗಳೂರು & ಶಿವಮೊಗ್ಗಕ್ಕೆ ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ತಕ್ಷಣ ಜಾರಿ: ಗೃಹ ಸಚಿವ ಪರಮೇಶ್ವರ್

■ವಿಜಯಸಾಕ್ಷಿ ಸುದ್ದಿ, ಗದಗ

ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳನ್ನು ಸೂಕ್ಷ್ಮ ಪ್ರದೇಶಗಳಾಗಿ ಪರಿಗಣಿಸಿ, ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ತಕ್ಷಣ ಜಾರಿಗೆ ಸರ್ಕಾರ ಕ್ರಮ ತೆಗೆದುಕೊಳ್ಳಲಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಗುರುವಾರ ಹೇಳಿದ್ದಾರೆ.

ಈ ಬಗ್ಗೆ ಸುದ್ದಿಗಾರರೊಂದಿಗೆ ಬೆಂಗಳೂರಿನಲ್ಲಿ ಮಾತನಾಡಿದ ಅವರು, "ಮಂಗಳೂರಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಯಾವುದೇ ಮುಲಾಜಿಲ್ಲದೇ ಕ್ರಮ ತೆಗೆದುಕೊಳ್ಳುತ್ತೇವೆ. ಪ್ರತಿಸಾರಿ ಈ ರೀತಿ ಆಗುತ್ತಿದ್ದರೆ ಸುಮ್ಮನೆ ಕೂರಲು ಆಗುವುದಿಲ್ಲ. ಕಾನೂನನ್ನು ಮತ್ತಷ್ಟು ಬಿಗಿ ಮಾಡುತ್ತೇವೆ" ಎಂದು ತಿಳಿಸಿದ್ದಾರೆ.

### ಮೂರನೇ ದಿನಕ್ಕೆ ಕಾಲಿಟ್ಟ ಮುಷ್ಕರ

# ತಮಟೆ ಬಾರಿಸಿ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮಂಗಳವಾರದಿಂದ ಮುಷ್ಕರ ಆರಂಭಿಸಿರುವ ಇಲ್ಲಿನ ಪುರಸಭೆ ಪೌರ ನೌಕರರ, ಪೌರ ಕಾರ್ಮಿಕರ ಪ್ರತಿಭಟನೆ ಗುರುವಾರ ಮೂರನೇ ದಿನಕ್ಕೆ ಕಾಲಿಟ್ಟಿದೆ. ಪೌರ ಕಾರ್ಮಿಕರು ತಮಟೆ ಬಾರಿಸುವ ಮೂಲಕ ಪ್ರತಿಭಟನೆ ನಡೆಸಿದ್ದು ವಿಶೇಷವಾಗಿತ್ತು.

ಕಳೆದ ಮೂರು ದಿನಗಳಿಂದ ಪೌರ ಕಾರ್ಮಿಕರು ಸ್ವಚ್ಛತೆ ಕೆಲಸಕ್ಕ ಬಂದಿಲ್ಲ. ಹಾಗಾಗಿ ಊರ ತುಂಬ ಕಸದ ರಾಶಿಗಳು ಕಾಣುತ್ತಿವೆ. ಪೌರ ನೌಕರರ ಸಂಘದ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ, ಸದಸ್ಯ ಹನಮಂತಪ್ಪ ನಂದೆಣ್ಣವರ ಮಾತನಾಡಿ, ಮೂರು ದಿನಗಳಿಂದ ನಡೆದಿರುವ ಮುಷ್ಕರದಿಂದಾಗಿ ಊರಿನ ಸ್ವಚ್ಛತೆಗೆ ಕಾರ್ಮಿಕರು ಬಂದಿಲ್ಲ. ಕಾರಣ ಇನ್ನೆರಡು ದಿನ ಹೀಗೆಯೇ ಬಿಟ್ಟರೆ ಊರೆಲ್ಲ ಗಬ್ಬು ವಾಸನೆ ಬರುತ್ತದೆ. ಸರ್ಕಾರ ಕೂಡಲೇ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ ಭೇಟಿ ನೀಡಿ ಮಾತನಾಡಿದರು. ಮುಖ್ಯಾಧಿಕಾರಿ ಮಹೇಶ ಹಡಪದ, ಮಂಜುಳಾ ಹೂಗಾರ, ಮಂಜುನಾಥ ಮುದಗಲ್ಲ ಸೇರಿದಂತೆ ಮತ್ತಿತರರು ಇದ್ದರು.



# ಬಿಜೆಪಿಯಿಂದ ಮೌನ ಪ್ರತಿಭಟನೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಆಸ್ಪತ್ರೆ ಬಳಿಯ ಪ್ರಧಾನ ಮಂತ್ರಿ ಜನೌಷಧಿ ಕೇಂದ್ರಗಳನ್ನ ಮುಚ್ಚಲು ಹೊರಡಿಸಿದ್ದ ಆದೇಶವನ್ನ ರದ್ದುಗೊಳಿಸುವಂತೆ ಆಗ್ರಹಿಸಿ ಇದೇ ಶನಿವಾರ ಜಿಲ್ಲೆಯ ಸರಕಾರಿ ಆಸ್ಪತ್ರೆಗಳ ಮುಂದೆ ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರಿಂದ ಮೌನ ಪ್ರತಿಭಟನೆ ನಡೆಯಲಿದೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ರಾಜ್ಯ ಕಾಂಗ್ರೆಸ್ ಸರ್ಕಾರ ಔಷಧಿ ಲಾಬಿಗೆ ಮಣಿದು ಸರ್ಕಾರಿ ಆಸ್ಪತ್ರೆಗಳ ಆವರಣ ಹಾಗೂ ಅಕ್ಕಪಕ್ಕದಲ್ಲಿರುವ ಜನೌಷಧಿ ಕೇಂದ್ರಗಳನ್ನು ಮುಚ್ಚುವ ನಿರ್ಧಾರ ಕೈಗೊಂಡಿರುವುದು ದುರದೃಷ್ಟಕರ. ಇಂತಹ ಜನವಿರೋಧಿ ನೀತಿಯನ್ನು ಖಂಡಿಸಿ ಜಿಲ್ಲೆ, ತಾಲೂಕು ಹಾಗೂ ಹೋಬಳಿ ಮಟ್ಟದ ಸರಕಾರಿ ಆಸ್ಪತ್ರೆಗಳ ಎದುರು ಶನಿವಾರ ಬೆಳಿಗ್ಗೆ 10 ಗಂಟೆಯಿಂದ 12 ಗಂಟೆಯವರೆಗೆ ಕೈಗೆ ಕಪ್ಪು ಪಟ್ಟಿಯನ್ನು ಧರಿಸಿ ಮೌನ ಪ್ರತಿಭಟನೆ ಮಾಡಲು ನಿರ್ಧರಿಸಲಾಗಿದೆ. ಸದರಿ ಪ್ರತಿಭಟನೆಗಳಲ್ಲಿ ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಸಚಿವ ಕಳಕಪ್ಪ ಬಂಡಿ ಭಾಗವಹಿಸಲಿದ್ದು, ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು, ಸಾರ್ವಜನಿಕರು ಪಾಲ್ಗೊಳ್ಳಬೇಕೆಂದು ಕೋರಿದ್ದಾರೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka